# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 213 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 15–03–2025 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 213 | RNI No: KARKAN/2023/88462 | KA/SK/CTA-874/2024-2026 | Chitradurga | Date: 15-03-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮನುಷ್ಯರಾಗಿ ಹುಟ್ಟಿ ದೈವತ್ವಕ್ಕೆ ಏರಿದವರು ಶ್ರೀಯೋಗಿ ನಾರೇಯಣ ಯತೀಂದ್ರರು 2

ಬಿಜೆಪಿ ನಾಯಕ ಎಂಪಿ ರೇಣುಕಾಚಾರ್ಯ ಕಾಂಗ್ರೆಸ್ ಸೇರ್ಪಡೆ? 3

ಓರ್ವ ಸ್ವಾಮಿಗೆ ತಿಪ್ಪೇಯು; ಪಲ್ಲಕ್ಕಿಯೂ ಒಂದೇ ಎಂದು ಬದುಕಿ ತೋರಿದ ತಿಪ್ಪೇರುದ್ರಸ್ವಾಮಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಬೆಸ್ಕಾಂ ಇಲಾಖೆಯಲ್ಲಿ ಇಂದು ಮಧ್ಯಾಹ್ನ ಗ್ರಾಹಕರ ಸಂವಾದ

» **ಚಳ್ಳಕೆರೆ**

ನಗರದ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಚೇರಿ ಆವರಣದಲ್ಲಿ ಮಾರ್ಚ್ 15ರ ಶನಿವಾರ ಮಧ್ಯಾಹ್ನ 3ಕ್ಕೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಂಡಿದ್ದು, ಸಭೆಯ ಅಧ್ಯಕ್ಷೆಯನ್ನು ಉಪವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಜಿ.ಶಿವಪ್ರಸಾದ್ ವಹಿಸುವರು. ವಿದ್ಯುತ್‌ಗೆ ಸಂಬಂಧಪಟ್ಟ ದೂರುಗಳಿದ್ದರೆ ನೇರವಾಗಿ ಸಭೆಗೆ ಆಗಮಿಸಿ ಲಿಖಿತ ರೂಪದಲ್ಲಿ ಅರ್ಜಿ ಸಲ್ಲಿಸಿ ಪರಿಹಾರ ಪಡೆಯುವಂತೆ ಮನವಿ ಮಾಡಲಾಗಿದೆ. ಹೆಚ್ಚಿನ ಮಾಹಿತಿಗೆ ಕಚೇರಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಪ್ರತಿತಿಂಗಳು ಮೂರನೇ ಶನಿವಾರ ಈ ಕಾರ್ಯಕ್ರಮವನ್ನು ಇಲಾಖೆ ಸೂಚನೆ ಮೇರೆಗೆ ಆಯೋಜಿಸಲಾಗುತ್ತಿದ್ದು, ಗ್ರಾಹಕರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಂಡುಕೊಳ್ಳುವ ವ್ಯವಸ್ಥೆಯನ್ನು ಬೆಸ್ಕಾಂ ಇಲಾಖೆ ಮಾಡಿದೆ.

### ಉಪಸಭಾಪತಿ ರುದ್ರಪ್ಪ ಲಮಾಣಿ ಕಾರು ಅಪಘಾತ: ಸ್ಥಿತಿ ಗಂಭೀರ



» **ಚಿತ್ರದುರ್ಗ**

ವಿಧಾನಸಭೆಯ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ ಅವರು ಅಪಘಾತಕ್ಕೀಡಾಗಿದ್ದು, ಅವರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ. ಜಿಲ್ಲೆಯ ಹಿರಿಯೂರ ತಾಲೂಕಿನ ಜವನಗೊಂಡನಹಳ್ಳಿ ಸಮೀಪದಲ್ಲಿ ಲಮಾಣಿ ಅವರಿಗೆ ಸ್ಕೂಟರ್ ಡಿಕ್ಕಿಯಾಗಿದ್ದು, ಗಂಭೀರಗವಾಗಿ ಗಾಯಗೊಂಡಿದ್ದಾರೆ. ಬೆಂಗಳೂರಿನಿಂದ ಸ್ವಗ್ರಾಮಕ್ಕೆ ತೆರಳುವಾಗ ಮಾರ್ಗಮಧ್ಯ, ಮೂತ್ರ ವಿಸರ್ಜನೆಗಾಗಿ ಕಾರಿನಿಂದ ಲಮಾಣಿ ಅವರು ಇಳಿದಾಗ ಅದೇ ವೇಳೆ ಬಂದಂತಹ ಸ್ಕೂಟರ್ ಡಿಕ್ಕಿ ಹೊಡೆದಿದೆ. ಆಗ ಅವರ ತಲೆ, ಕೈ, ಕಾಲುಗಳಿಗೆ ಪೆಟ್ಟಾಗಿದ್ದು, ತೀವ್ರ ರಕ್ತಸ್ರಾವವಾಗಿದೆ. ಕೂಡಲೇ ಲಮಾಣಿ ಅವರನ್ನು ಹಿರಿಯೂರು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯ ಎಸ್‌ಎಸ್ ಆಸ್ಪತ್ರೆಗೆ ರವಾನಿಸಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ.

### ವಿಶ್ವ ವಿದ್ಯಾಲಯಗಳನ್ನು ಮುಚ್ಚುವ ಬಗ್ಗೆ ತೀರ್ಮಾನ ಆಗಿಲ್ಲ: ಸಿಎಂ

» **ಬೆಂಗಳೂರು**

ವಿಶ್ವ ವಿದ್ಯಾಲಯಗಳನ್ನು ಮುಚ್ಚುವ ಬಗ್ಗೆ ತೀರ್ಮಾನ ಆಗಿಲ್ಲ: ಕ್ಯಾಬಿನೆಟ್ ಉಪ ಸಮಿತಿ ವರದಿಯೇ ಇನ್ನೂ ಬಂದಿಲ್ಲ. ಉಪ ಸಮಿತಿ ವರದಿ ಬರುವ ಮೊದಲೇ ಬಿಜೆಪಿಗೆ ಆತಂಕ ಏಕೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸದನದಲ್ಲಿ ತಿಳಿಸಿದರು. ಈ ಬಗ್ಗೆ ವಿರೋಧ ಪಕ್ಷದ ಸದಸ್ಯರು ವ್ಯಕ್ತಪಡಿಸಿದ ಆತಂಕಕ್ಕೆ ಉತ್ತರಿಸಿದರು. ಉಪ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಈ ಸಂಗತಿಯ ಕೂಲಂಕುಷ ಪರಿಶೀಲನೆಗೆ ಉಪ ಸಮಿತಿ ರಚಿಸಲಾಗಿದೆ. ಉಒ ಸಮಿತಿ ವರದಿ ಕೊಡುವುದು ಬಾಕಿ ಇದೆ. ವರದಿ ಬರುತ್ತಿದ್ದಂತೆ ಅದನ್ನು ಕ್ಯಾಬಿನೆಟ್ ಮುಂದೆ ಇಟ್ಟು ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು. ವರದಿ ಬರುವ ಮೊದಲೇ ವಿವಿಗಳನ್ನು ಮುಚ್ಚುತ್ತೇವೆ ಎನ್ನುವುದು ಸರಿಯಲ್ಲ. ಇಂಥಾ ತೀರ್ಮಾನ ನಮ್ಮಿಂದ ಆಗಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದರು.

### ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆ

» **ದಾವಣಗೆರೆ**

ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ಅವರ ನೇತೃತ್ವದಲ್ಲಿ ಮಾರ್ಚ್ 18 ರಂದು ಮಧ್ಯಾಹ್ನ 3.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿ.ಪಂ ಸಿಇಓ ತಿಳಿಸಿದ್ದಾರೆ.

## ಮಾರ್ಚ್ 16ರಂದು ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ದೊಡ್ಡ ರಥೋತ್ಸವ

# ತಿಪ್ಪೇರುದ್ರಸ್ವಾಮಿ ರಥೋತ್ಸವಕ್ಕೆ ಕ್ಷಣಗಣನೆ

» **ಚಿತ್ರದುರ್ಗ**

ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರೆಯ ದೊಡ್ಡ ರಥೋತ್ಸವ ಇದೇ ಮಾರ್ಚ್ 16 ರಂದು ಭಾನುವಾರ ನಡೆಯಲಿದ್ದು, ಜಾತ್ರೆಗೆ ಅಂತಿಮ ಹಂತದ ಸಿದ್ಧತೆಗಳು ಪೂರ್ಣಗೊಂಡಿದ್ದು, ಹಟ್ಟಿ ತಿಪ್ಪೇಶನ ಜಾತ್ರೆಗೆ ಕ್ಷಣಗಣನೆ ಆರಂಭವಾಗಿದೆ.

ಮಧ್ಯ ಕರ್ನಾಟಕದ ಐತಿಹಾಸಿಕ ನಾಯಕನಹಟ್ಟಿ ಜಾತ್ರೆಗೆ ನಾಡಿನ ಹಲವು ಭಾಗಗಳಿಂದಲಕ್ಷಾಂತರಭಕ್ತರುಆಗಮಿಸುವ ಹಿನ್ನೆಲೆಯಲ್ಲಿ ಭಕ್ತಾಧಿಕಾರಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಲಾಗಿದೆ. ಜಾತ್ರೆ ಪ್ರಯುಕ್ತ ನಾಯಕನಹಟ್ಟಿ ಪಟ್ಟಣ ನೂತನ ವಧುವಿನಂತೆ ಸಿಂಗಾರಗೊಂಡಿದೆ.





ತಿಪ್ಪೇರುದ್ರಸ್ವಾಮಿ ದೇವಾಲಯದ ಒಳಮಠಮತ್ತುಹೊರಮಠದಆವರಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವ ನಿಟ್ಟಿನಲ್ಲಿ ಎರಡೂ ದೇವಾಲಯದ ಆವರಣ ಸ್ವಚ್ಛಗೊಳಿಸಲಾಗಿದೆ. ಬಿಸಿಲಿನ ತಾಪ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಎರಡೂ ದೇವಾಲಯಗಳ ಆವರಣದಲ್ಲಿ ಬೃಹತ್ ಚಪ್ಪರದ ವ್ಯವಸ್ಥೆ ಮಾಡಲಾಗಿದೆ. ಇದರ ಜೊತೆಗೆ ಹೊರಮಠ ದೇವಾಲಯದ ಆವರಣದ ಸುತ್ತಲೂ ಶಾಶ್ವತವಾಗಿ ನೆರಳಿನ ವ್ಯವಸ್ಥೆಗಾಗಿ ಶೆಡ್ ನಿರ್ಮಾಣ ಮಾಡಲಾಗಿದೆ. ಪಟ್ಟಣದ ಎಲ್ಲಾ ವಾರ್ಡ್ ಮತ್ತು ರಸ್ತೆಯ ಇಕ್ಕೆಲಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ಬಿಸಿಲು ಹೆಚ್ಚಿರುವ ಕಾರಣ ಭಕ್ತಾಧಿಗಳಿಗೆ ಕುಡಿಯುವ ನೀರಿಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಕಂದಾಯ ಇಲಾಖೆಯಿಂದ ಸುಮಾರು 50 ಟ್ಯಾಂಕರ್‌ಗಳ ಮೂಲಕ ಹಾಗೂ 20 ಸಾವಿರ ಲೀಟರ್ ಸಾಮರ್ಥ್ಯದ 6 ಹಾಲಿನ ಟ್ಯಾಂಕರ್ ಮೂಲಕ ಶುದ್ಧ ಕುಡಿಯುವ ನೀರಿಗೆ ವಿಶೇಷವಾದ ವ್ಯವಸ್ಥೆ ರೂಪಿಸಲಾಗಿದೆ.

ಮುಕ್ತಿಬಾವುಟ– ವರ್ಷದೊಳಗೆ ಹರಾಜಿನ ಮೊತ್ತ ಸಲ್ಲಿಸಲು ಅಡ್ವಾನ್ಸ್ ಚೆಕ್: ದೇವಾಲಯದ ರೂಢಿ ಮತ್ತು ಸಂಪ್ರದಾಯ ಧಾರ್ಮಿಕ ಪದ್ಧತಿಯಂತೆ ಮುಕ್ತಿಬಾವುಟವನ್ನು ಹರಾಜು ಮಾಡುತ್ತಾ ಬಂದಿದ್ದು, ಹಿಂದೂ ಧಾರ್ಮಿಕ ದತ್ತಿ ಇಲಾಖಾ ಕಾಯ್ದೆಯ ಸೆಕ್ಷನ್–58ರಂತೆ ರೂಢಿ ಸಂಪ್ರದಾಯಗಳನ್ನು ಎಲ್ಲ ಅಧಿಕಾರಿಗಳು ಪಾಲಿಸಬೇಕಾಗಿದೆ, ಅದರಂತೆ ಮುಕ್ತಿಬಾವುಟ ಹರಾಜು ನಡೆಸಲು ತೀರ್ಮಾನಿಸಲಾಗಿದೆ.

ಮುಕ್ತಿಬಾವುಟ ಹರಾಜು ನಡೆಸುವ ಮುಂಚೆ ನೂರು ರೂಪಾಯಿ ಮುಖ ಬೆಲೆಯ ಛಾಪ ಕಾಗದ ತಯಾರಿಸಿಕೊಂಡು ಆಖೈರು ಹರಾಜುದಾರರನ್ನು 1ನೇ ಪಾರ್ಟಿಯಾಗಿ ಸಹಿ ಪಡೆಯಲು ಹಾಗೂ ವರ್ಷದೊಳಗೆ ಹರಾಜಿನ ಮೊತ್ತವನ್ನು ಸಲ್ಲಿಸಲು ಒಂದು ಅಡ್ವಾನ್ಸ್ ದಿನಾಂಕದ ಚೆಕ್‌ನ್ನು ಪಡೆದುಕೊಳ್ಳಲು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಅದರಂತೆಯೇ ಮುಕ್ತಿ ಬಾವುಟ ಹರಾಜು ಪ್ರಕ್ರಿಯೆ ನಡೆಸಲಾಗುವುದು, ಈ ನಿಟ್ಟಿನಲ್ಲಿ ಹರಾಜು ಕೂಗುವವರು ಸಹಕರಿಸಬೇಕು. ಮುಕ್ತಿಬಾವುಟ ಹರಾಜಿನ ಬಾಬ್ತು ಬಾಕಿ ಇರಿಸಿಕೊಂಡಿರುವವರೆಗಿ ಹರಾಜಿನಲ್ಲಿ ಭಾಗವಹಿಸಲು ಅವಕಾಶ ನೀಡಬಾರದು ಎಂದು ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಮೂಲ ಸೌಕರ್ಯದ ವ್ಯವಸ್ಥೆ: ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಕಂದಾಯ ಇಲಾಖೆ, ಆರೋಗ್ಯ ಇಲಾಖೆ, ಪಟ್ಟಣ ಪಂಚಾಯಿತಿ, ಲೋಕೋಪಯೋಗಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ಅಗತ್ಯ ಸಿದ್ಧತೆ ಕಾರ್ಯ ಕೈಗೊಳ್ಳಲಾಗಿದೆ.

ನಾಯಕನಹಟ್ಟಿ ಪಟ್ಟಣ ವ್ಯಾಪ್ತಿಯಲ್ಲಿ ರಸ್ತೆ ಡಾಂಬರೀಕಣ,ಪಾದಗಟ್ಟೆರಸ್ತೆಅಗಲೀಕರಣ, ಚರಂಡಿ ಸ್ವಚ್ಛಗೊಳಿಸಲಾಗಿದೆ. ಅನಾವಶ್ಯಕ ಮುಳ್ಳುಗಳ ಗಿಡ ತೆರವುಗೊಳಿಸಲಾಗಿದೆ. ಪಟ್ಟಣದ ಎಲ್ಲ ವಾರ್ಡ್‌ಗಳಿಗೆ ನಿರಂತರವಾಗಿ ನೀರು ಸರಬರಾಜು, ಬೆಸ್ಕಾಂ ವತಿಯಿಂದ ನಿರಂತರ ವಿದ್ಯುತ್ ಪೂರೈಕೆ ಮಾಡುವ ಮೂಲಕ ಬೀದಿದೀಪ, ಹೈಮಾಸ್ಟ್ ದೀಪಗಳ ವ್ಯವಸ್ಥೆ ಮಾಡಲಾಗಿದೆ. ತೇರುಬೀದಿ ಹಾಗೂ ಪಾದಗಟ್ಟೆ ರಸ್ತೆಯ ಶಿಥಿಲ ವಿದ್ಯುತ್ ಕಂಬಗಳನ್ನು ತೆರವು ಗೊಳಿಸಿ, ಹೊಸ ವಿದ್ಯುತ್ ಕಂಬಗಳನ್ನು ಅಳವಡಿಸಲಾಗಿದೆ. ಜಾತ್ರೆಗೆ ಬರುವ ಭಕ್ತರಿಗೆ ಪಟ್ಟಣದ ಹಲವು ಕಡೆಗಳಲ್ಲಿ ಶೌಚಾಲಯ ವ್ಯವಸ್ಥೆ, ಬಳಸಲು ನೀರಿನ ತೊಟ್ಟಿಗಳು, ಕೊಳವೆ ಬಾವಿಗಳಿಂದ ನಿರಂತರವಾಗಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ವ್ಯವಸ್ಥೆ, ಚರಂಡಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಫಿನಾಯಿಲ್, ಸೊಳ್ಳೆಗಳ ನಿಯಂತ್ರಣಕ್ಕೆ ಧೂಮೀಕರಣ ವ್ಯವಸ್ಥೆ ಹಮ್ಮಿಕೊಳ್ಳಲಾಗಿದೆ. ಜಾತ್ರೆಗೆ ಬರುವ ಭಕ್ತರಿಗೆ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಬ್ಯಾನರ್‌ಗಳ ಅಳವಡಿಕೆ ಸೇರಿದಂತೆ ಅಗತ್ಯ ಸಿದ್ಧತೆಗಳನ್ನು ನಾಯಕನಹಟ್ಟಿ ಪಟ್ಟಣ ಪಂಚಾಯಿತಿಯಿಂದ ಕೈಗೊಳ್ಳಲಾಗಿದೆ.

ಜಾತ್ರೆಗೆ ಬರುವ ಭಕ್ತಾಧಿಗಳಿಗೆ ಅನುಕೂಲವಾಗುವಂತೆ 4 ಕಡೆ ತಾತ್ಕಾಲಿಕ ಕ್ಲಿನಿಕ್, 4 ಮೊಬೈಲ್ ಆಂಬುಲೆನ್ಸ್, ನೀರಿನ ಶುದ್ಧತೆ ಹಾಗೂ ಆಹಾರ ತಪಾಸಣೆ ಬಗ್ಗೆ ಪರೀಕ್ಷೆ ಇತರೆ ಕೆಲಸ ಕಾರ್ಯಗಳಿಗೆ ಒಟ್ಟು 150 ಜನ ಅಧಿಕಾರಿ, ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಜಾತ್ರೆ ಸಮಯದಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುವ ಸಲುವಾಗಿ ಚಳ್ಳಕೆರೆ ನಗರಸಭೆ ಮತ್ತು ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಿಂದ ಪೌರಕಾರ್ಮಿಕರನ್ನು ನಿಯೋಜಿಸಲಾಗಿದ್ದು, ಸ್ವಚ್ಚತಾ ಕೆಲಸಕ್ಕೆ ಹೆಚ್ಚು ಆದ್ಯತೆ ನೀಡಲು ಕ್ರಮ ವಹಿಸಲಾಗಿದೆ.

ಸುಗಮ ಸಂಚಾರಕ್ಕೆ ವ್ಯವಸ್ಥೆ: ಜಾತ್ರೆಯಲ್ಲಿ ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಪಟ್ಟಣದ ಹಲವು ಕಡೆಗಳಲ್ಲಿ ಬಸ್‌ನಿಲ್ದಾಣಗಳನ್ನು ಸ್ಥಾಪಿಸಲಾಗಿದೆ. ದಾವಣಗೆರೆ–ಜಗಳೂರು– ಹೊಸಪೇಟೆ ಕಡೆಯಿಂದ ಬರುವ ವಾಹನಗಳಿಗೆ ಪಟ್ಟಣದ ಗಂಗಯ್ಯನಹಟ್ಟಿ ಬಳಿ. ಬಳ್ಳಾರಿ–ಅನಂತಪುರ– ರಾಯದುರ್ಗ–ಕಲ್ಯಾಣದುರ್ಗ ಕಡೆಯಿಂದ ಬರುವ ವಾಹನಗಳಿಗೆ ತಳಕು ರಸ್ತೆಯ ಮದರಸಾದ ಬಳಿ. ಬೆಂಗಳೂರು– ತುಮಕೂರು–ಚಳ್ಳಕೆರೆ– ಚಿತ್ರದುರ್ಗ ಮಾರ್ಗದಿಂದ ಬರುವವರಿಗೆಮನಮ್ಮೆನಹಟ್ಟಿಏಕಾಂತೇಶ್ವರ ದೇವಾಲಯದ ಬಳಿ ಬಸ್‌ನಿಲ್ದಾಣಗಳನ್ನು ತೆರೆಯಲಾಗಿದೆ.

200 ಜಾತ್ರಾ ವಿಶೇಷ ವಾಹನಗಳ ಕಾರ್ಯಾಚರಣೆ ಶ್ರೀ ಕ್ಷೇತ್ರ ನಾಯಕನಹಟ್ಟಿಯಲ್ಲಿ ಮಾರ್ಚ್ 15 ರಿಂದ 17 ರವರೆಗೆ ಜರುಗಲಿರುವ ಶ್ರೀಗುರುತಿಪ್ಪೇರುದ್ರಸ್ವಾಮಿ ರಥೋತ್ಸವ ಅಂಗವಾಗಿ ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗದ ವತಿಯಿಂದ ಚಿತ್ರದುರ್ಗ, ಚಳ್ಳಕೆರೆ, ಹೊಸದುರ್ಗ, ಪಾವಗಡ ಘಟಕಗಳಿಂದ ಒಟ್ಟು 200 ಜಾತ್ರಾ ವಿಶೇಷ ವಾಹನಗಳ ಕಾರ್ಯಾಚರಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ವಿಶೇಷ ವಾಹನಗಳ ಕಾರ್ಯಾಚರಣೆ ಮಾರ್ಗ ಇಂತಿದೆ. ಚಿತ್ರದುರ್ಗ–ನಾಯಕನಟ್ಟಿ ವಯಾ ಬೆಳಗಟ್ಟ, ಹಾಯ್ಕಲ್, ಚಳ್ಳಕೆರೆ. ಚಳ್ಳಕೆರೆ–ನಾಯಕನಹಟ್ಟಿ ವಯಾ ನೇರ್ಲಗುಂಟೆ.ಹಿರಿಯೂರು–ನಾಯಕನಹಟ್ಟಿ ವಯಾ ಸಾಣಿಕೆರೆ–ಚಳ್ಳಕೆರೆ–ನೇರ್ಲಗುಂಟೆ. ನಾಯಕನಹಟ್ಟಿ–ಪರಶುರಾಂಪು ವಯಾ ಚಳ್ಳಕೆರೆ ಮಾರ್ಗದಲ್ಲಿ ಸಂಚರಿಸಲಿವೆ.

ಪ್ರಯಾಣಿಕರಜನದಟ್ಟಣೆಗನುಗುಣವಾಗಿ ಹೆಚ್ಚುವರಿ ವಾಹನ ಕಾರ್ಯಾಚರಣೆ ಮಾಡಲಾಗುವುದು. ಭಕ್ತಾಧಿಗಳು ವಿಶೇಷ ವಾಹನಗಳ ಸದುಪಯೋಗವನ್ನು ಉತ್ತಮ ರೀತಿಯಿಂದ ಪಡೆದುಕೊಳ್ಳಬೇಕು ಎಂದು ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

**ಪ್ರಾಣಿ ಬಲಿ ನಿಷೇಧ:** ಕರ್ನಾಟಕ ಪ್ರಾಣಿ ಬಲಿ ನಿಷೇಧ ಕಾಯ್ದೆ ಅನ್ವಯ ದೇವಸ್ಥಾನ ಹಾಗೂ ದೇವಸ್ಥಾನದ ಅವರಣದಲ್ಲಿ ದೇವರ ಹೆಸರಿನಲ್ಲಿ ಪ್ರಾಣಿ ಬಲಿ ನೀಡುವುದು ಕಾನೂನಿಗೆ ವಿರುದ್ಧವಾಗಿರುತ್ತದೆ. ಮಾರ್ಚ್ 16 ರಂದು ನಾಯಕನಹಟ್ಟಿಯ ಶ್ರೀಗುರು ತಿಪ್ಪೆರುದ್ರಸ್ವಾಮಿ ದೊಡ್ಡ ರಥೋತ್ಸವ ಜರುಗಲಿದ್ದು, ಇದಕ್ಕೆ ಪೂರಕವಾಗಿ ಮಾರ್ಚ್ 09 ರಿಂದ 17 ರವರೆಗೆ ಜಾತ್ರ ನಡೆಯಲಿದೆ. ಈ ಜಾತ್ರೆಯ ಸಂದರ್ಭದಲ್ಲಿ ದೇವಸ್ಥಾನದ ಅವರಣ ಹಾಗೂ ಸುತ್ತಮುತ್ತಲಿನ ಪ್ರದೇಶದೊಳಗೆ ಭಕ್ತಾಧಿಗಳು, ಸಾರ್ವಜನಿಕರು ದೇವರ ಹೆಸರಿನಲ್ಲಿ ಯಾವುದೇ ರೀತಿಯ ಪ್ರಾಣಿ ಬಲಿ ನೀಡುವುದನ್ನು ಮತ್ತು ಇತರೆ ಪ್ರಾಣಿಗಳನ್ನು ತೆಗೆದುಕೊಂಡು ಬರುವುದು ಹಾಗೂ ಮಾರಕಾಸ್ತ್ರಗಳನ್ನು ತರುವುದು, ಇತರೆ ಅನಾಗರೀಕ ಪದ್ಧತಿಗಳನ್ನು ನಿಷೇಧಿಸಿ ಜಿಲ್ಲಾಧಿಕಾರಿ ಟಿ. ವೆಂಕಟೇಶ ಆದೇಶ ಹೊರಡಿಸಿದ್ದಾರೆ.

ಈ ಸಂಬಂಧವಾಗಿ ಪ್ರಾಣಿ ಬಲಿ ನಿಷೇಧ ಪ್ರಚಾರಕ್ಕಾಗಿ ಅಗತ್ಯವಾಗಿ ಬೇಕಾದ ಕರಪತ್ರ, ಬ್ಯಾನರ್‌ಗಳ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ಈಗಾಗಲೇ ಅಗತ್ಯವಿರುವ 8 ಕಡೆ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಲಾಗಿದೆ.

**ಮದ್ಯಪಾನನಿಷೇಧ:** ಜಾತ್ರೆಯಆವರಣದಿಂದ ಮೂರು ಕಿಲೋಮೀಟರ್ ವ್ಯಾಪ್ತಿಯಲ್ಲಿ ಮಾರ್ಚ್ 16 ರಿಂದ 17 ರವರೆಗೆ ಮದ್ಯ ಮಾರಾಟ ನಿಷೇಧಿಸಲಾಗಿದೆ. ನಿಷೇಧದ ಪೂರ್ವದಲ್ಲಿಗ್ರಾಮದೊಳಗೆಮದ್ಯತರದಂತೆ ಮುಂಜಾಗ್ರತಾ ಕ್ರಮಕೈಗೊಳ್ಳುವಂತೆ ಅಬಕಾರಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

**ರಥಕ್ಕೆ ರೂ.2.50 ಕೋಟಿ ವಿಮೆ:** ನಾಯಕನಹಟ್ಟಿ ಜಾತ್ರೆಯ ಕೇಂದ್ರ ಬಿಂದು ದೊಡ್ಡ ರಥವಾಗಿದ್ದು, ಪ್ರತಿ ವರ್ಷದಂತೆ ರಥ ಮತ್ತು ಬಾಬುದಾರರು ಹಾಗೂ ಭಕ್ತಾಧಿಗಳಿಗೆ ಅನುಕೂಲವಾಗುವಂತೆ ಅಪಘಾತ ವಿಮೆಯನ್ನು ಮಾಡಿಸಲಾಗಿದ್ದು, ಗುರು ತಿಪ್ಪೇರುದ್ರಸ್ವಾಮಿ ರಥಕ್ಕೆ ರೂ.2.50 ಕೋಟಿ ಮೊತ್ತದ ವಿಮಾ ಸೌಲಭ್ಯಗಳನ್ನು ಒದಗಿಸಲಾಗಿದೆ.

ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಮಾರ್ಗದರ್ಶನ ಪಡೆದು ದೊಡ್ಡರಥಕ್ಕೆ ಮತ್ತು ಚಿಕ್ಕರಥಕ್ಕೆ ದುರಸ್ಥಿ ಮಾಡಿಸಿ, ಸರ್ವೀಸಿಂಗ್ ಮಾಡಿ, ರಥೋತ್ಸವಕ್ಕೆ ಸಿದ್ಧಪಡಿಸಲಾಗಿದೆ. ಮಧ್ಯ ಕರ್ನಾಟಕದ ಭಾಗದ ಅತೀ ಎತ್ತರದ ಸುಮಾರು 200 ಟನ್ ತೂಕವಿರುವ ಈ ರಥವು 5 ಚಕ್ರಗಳನ್ನು ಹೊಂದಿದೆ. ರಥಕ್ಕೆ ಕಳೆದ ಎರಡು ದಿನಗಳಿಂದ ಬಣ್ಣಬಣ್ಣದ ಬಾವುಟಗಳನ್ನು ಅಳವಡಿಸುವ ಕಾರ್ಯ ಕೈಗೊಳ್ಳಲಾಗಿದ್ದು, ರಥವನ್ನು ಎಳೆಯುವ 2 ಅಡಿ ಸುತ್ತಳತೆ ಇರುವ ನೂತನ ಮಿಣಿ (ಹಗ್ಗ)ಯನ್ನು ಪರೀಕ್ಷಿಸಲಾಗಿದೆ. ಆ ಮೂಲಕ ಜಾತ್ರೆಗೆ ರಥವನ್ನು ಎಲ್ಲಾ ಹಂತದಲ್ಲೂ ಸಿದ್ಧಗೊಳಿಸಲಾಗಿದೆ.

ನಾಯಕನಹಟ್ಟಿ ಜಾತ್ರೆಗೆ ಬರುವ ಭಕ್ತಾಧಿಗಳಿಗೆ ಯಾವುದೇ ತರಹದ ಕುಂದುಕೊರತೆ ಉಂಟಾಗದಂತೆ ಅಗತ್ಯವಾದ ಎಲ್ಲಾ ಸಿದ್ಧತೆಯನ್ನು ಜಿಲ್ಲಾಡಳಿತ ಕೈಗೊಂಡಿದೆ.

## ಪ್ರಮುಖ ಸುದ್ದಿ

# ಸರ್ಕಾರಗಳ ಯೋಜನೆ ಯಶಸ್ವಿಗೆ ಜನರ ಸಹಕಾರ ಕಾರಣ

» **ಚಿತ್ರದುರ್ಗ**

ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳ ಸಹಕಾರದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳು ಯಶಸ್ವಿಯಾಗಲು ಸಾಧ್ಯ ಎಂದು ಲೋಕಾಯುಕ್ತ ಇನ್ಸ್‌ಪೆಕ್ಟರ್ ಹೆಚ್. ಗುರುಬಸವರಾಜ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಸವೇಶ್ವರ ವಿದ್ಯಾಸಂಸ್ಥೆ ಇವುಗಳ ಸಂಯುಕ್ತಾಶ್ರಯದಲ್ಲಿ ಹಿರಿಯ ನಾಗರೀಕರ ಸಹಾಯವಾಣಿ ಕೇಂದ್ರದಲ್ಲಿ ಹಿರಿಯ ನಾಗರೀಕರು ಹಾಗೂ ವಿಕಲಚೇತನರಿಗೆ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ವಯೋ ವಂದನಾ ಕಾರ್ಡ್ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಅಯುಷ್ಮಾನ್‌ವಯೋವಂದನಾಕಾರ್ಡ್ ಹಿರಿಯ ನಾಗರೀಕರಿಗೆ, ವಿಕಲಚೇತರಿಗೆ



ಹಾಗೂ ದಿನ ದುರ್ಬಲರಿಗೆ ಸಾಕಷ್ಟು ಉಪಯೋಗವಾಗಲಿದೆ. ಬಸವೇಶ್ವರ ವಿದ್ಯಾಸಂಸ್ಥೆ ಅತ್ಯುತ್ತಮ ಕೆಲಸ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಧಮ್ಮ ಕೇಂದ್ರದ ಕಾರ್ಯದರ್ಶಿ ಆರ್.ವಿಶ್ವಸಾಗರ್ ಮಾತನಾಡಿ ಕ್ರಿಯಾಶೀಲ ಮನಸ್ಸು, ದೇಹವಿದ್ದಾಗ ಮಾತ್ರ ಮನುಷ್ಯ ಲವಲವಿಕೆಯಿಂದ ಇರಬಹುದು. ಮುಂದುವರೆದ ದೇಶಗಳಲ್ಲಿ ವಯೋವೃದ್ದರು ಜಾಸ್ತಿಯಿರುತ್ತಾರೆ. ಆದರೆ ಅಲ್ಲಿ ವಯಸ್ಸಾದವರನ್ನು ಜೋಪಾನವಾಗಿ ನೋಡಿಕೊಳ್ಳಲಾಗುತ್ತದೆ. ನಮ್ಮ ದೇಶದಲ್ಲಿ ಯುವ ಜನಾಂಗದ ಸಂಖ್ಯೆ ಹೆಚ್ಚಿದೆ. ಅಂಬೇಡ್ಕರ್, ಗಾಂಧಿ ಇವರುಗಳೆಲ್ಲಾ ಜ್ಞಾನವಂತರಾಗಿದ್ದರು. ವಯಸ್ಸಾದ ತಂದೆ ತಾಯಿಗಳನ್ನು ಅನಾಥಾಶ್ರಮಕ್ಕೆ ಸೇರಿಸುವ ಬದಲು ಮಕ್ಕಳು ಆರೈಕೆ ಮಾಡಬೇಕೆಂದು ಹೇಳಿದರು.ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನವಿಕಾಸಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ ಮಾತನಾಡುತ್ತ ನಮ್ಮ ಯೋಜನೆಯಲ್ಲಿ ನಿರ್ಗತಿಕರಿಗೆ ಪ್ರತಿ ತಿಂಗಳು ಒಂದು ಸಾವಿರ ರೂ.ಮಾಶಾಸನ ನೀಡಲಾಗುವುದು. ಇದರ ಜೊತೆಗೆ ವಾತ್ಸಲ್ಯ ಮನೆ ನಿರ್ಮಿಸಿಕೊಟ್ಟು ನೆಮ್ಮದಿಯ ಬದುಕಿಗೆ ಅವಕಾಶ ಮಾಡಿಕೊಡಲಾಗುತ್ತದೆ. ವಿಕಲಚೇತನರಿಗೆ ವೀಲ್‌ಚೇರ್, ವಾಕಿಂಗ್ ಸ್ಟಿಕ್, ಹಾಸಿಗೆಯಲ್ಲೆ ಮಲಗಿರುವವರಿಗೆ ವಾಟರ್ ಬೆಡ್‌ಗಳನ್ನು ನೀಡಲಾಗುವುದು. ಬಸವೇಶ್ವರ ವಿದ್ಯಾಸಂಸ್ಥೆಯವರು ಹಿರಿಯ ನಾಗರೀಕರು ಹಾಗೂ ವಿಕಲಚೇತರಿಗೆ ಗುರುತಿನ ಚೀಟಿಗಳನ್ನು ವಿತರಿಸುತ್ತಿರುವುದು ಹಿರಿಯರನ್ನು ಗೌರವಿಸಿದಂತೆ ಎಂದು ಶ್ಲಾಘಿಸಿದರು.

ನಿವೃತ್ತ ಇಂಜಿನಿಯರ್ ಬೋರಯ್ಯ ಮಾತನಾಡಿ ವೃದ್ದರನ್ನು ದೇವರಂತೆ ಕಾಣಬೇಕು. ಕೆಲವು ಕಡೆ ಮಕ್ಕಳ ನಿರ್ಲಕ್ಷೆಯಿಂದ ವಯಸ್ಸಾದವರು ಅನಾಥರಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ ಬಸವೇಶ್ವರ ವಿದ್ಯಾಸಂಸ್ಥೆ ವಿಕಲಚೇತನರು ಹಾಗೂ ಹಿರಿಯ ನಾಗರೀಕರಿಗೆ ಗುರುತಿನ ಚೀಟಿಗಳನ್ನು ನೀಡುವ ಮೂಲಕ ಸರ್ಕಾರದಿಂದ ಸಿಗುವ ಸೌಲತ್ತುಗಳನ್ನು ಒದಗಿಸುತ್ತಿರುವುದು ಒಳ್ಳೆಯ ಕೆಲಸ ಎಂದು ಗುಣಗಾನ ಮಾಡಿದರು.

ಪ್ರಭಾವತಿ ಶಂಕರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ವಿಕಲಚೇತನರು, ಹಿರಿಯ ನಾಗರೀಕರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸೌಲಭ್ಯಗಳು ಸಿಗಬೇಕು. ಕೆಲವು ವಿದ್ಯಾವಂತರುಗಳೆ ಅನಾಗರೀಕರವಾಗಿ ನಡೆದುಕೊಳ್ಳುತ್ತಿದ್ದಾರೆ. ಹೆತ್ತರವನ್ನು ನೋಡಿಕೊಳ್ಳದೆ ನಿರ್ಲಕ್ಷೆ ಮಾಡುತ್ತಿರುವುದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

## ಫಾಸ್ಟ್ ನ್ಯೂಸ್

### ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ತಾಳ್ಯ ಹೋಬಳಿಯ ಕೊಳಾಳು ಕದುರೆ ದೇವರಹಟ್ಟಿಯಲ್ಲಿ ನೆಲೆಸಿರುವ ಕಾಟಲಿಂಗೇಶ್ವರಸ್ವಾಮಿ ಹಾಗೂ ಕದುರೆ ನರಸಿಂಹಸ್ವಾಮಿಯ ದೊಡ್ಡದೇವರ ಜಾತ್ರಾ ಮಹೋತ್ಸವ ಮಾ.14 ರಿಂದ 18 ರವರೆಗೆ ಐದು ದಿನಗಳ ಕಾಲ ನಡೆಯಲಿದ್ದು, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಗುವುದು. 16 ರಂದು ಸಂಜೆ 7-30 ಕ್ಕೆ ನಡೆಯುವ ಪ್ರತಿಭಾ ಪುರಸ್ಕಾರದ ಅಧ್ಯಕ್ಷತೆಯನ್ನು ಅನಘ್ ಎಜುಕೇಷನ್ ಅಂಡ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಎನ್.ಕಿರಣ್‌ಕುಮಾರ್ ಯಾದವ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಇಂದಿರಾ ಕಿರಣ್, ಮಾಜಿ ಸದಸ್ಯ ಡಿ.ಕೆ.ಶಿವಮೂರ್ತಿ, ಪ್ರೌಢಶಾಲೆ ನಿವೃತ್ತ ಮುಖ್ಯ ಶಿಕ್ಷಕ ಡಿ.ಎನ್.ಗೋವಿಂದಪ್ಪ ಹೊಳಲ್ಕೆರೆ ಎ.ಪಿ.ಎಂ.ಸಿ. ಮಾಜಿ ಅಧ್ಯಕ್ಷ ಎನ್.ರಾಮಪ್ಪ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯೆ ರುಕ್ಮಿಣಿ ಗಿರಿಯಪ್ಪ, ಹಿರಿಯೂರು ಎ.ಪಿ.ಎಂ.ಸಿ. ಮಾಜಿ ಅಧ್ಯಕ್ಷ ಬಿ.ಕೆ.ಉಗ್ರಮೂರ್ತಿ, ಚೌಡಗೊಂಡನಹಳ್ಳಿ ಮಾಜಿ ಪ್ರಧಾನ ಪಿ.ಸಿ.ಮಹಲಿಂಗಪ್ಪ, ತೇಕಲವಟ್ಟಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಆರ್. ಮಂಜುನಾಥ್, ಪೂಜಾರಿ ಉಗ್ರಪ್ಪ ಸಾಹುಕಾರ್ ಚಿತ್ತಯ್ಯ, ಗಣೇಪೂಜಾರಿ ಮದ್ದಪ್ಪ, ಗೌಡ್ರು ದಾಸಪ್ಪ, ಪೂಜಾರಿ ಈರಪ್ಪ, ಗೌಡಣ್ಣ, ಪೂಜಾರಿ ಚಿತ್ತಯ್ಯ ಇನ್ನು ಅನೇಕರು ಪಾಲ್ಗೊಳ್ಳುವರು. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ದೇವಸ್ಥಾನದ ಕಮಿಟಿಯವರು ವಿನಂತಿಸಿದ್ದಾರೆ.

### ಬೃಹತ್ ಉಚಿತ ಆರೋಗ್ಯ ತಪಾಸಣೆ

» ಚಿತ್ರದುರ್ಗ

ಶರಣ ಬಸವೇಶ್ವರ ದಾಸೋಹ ಮಠ, ದೊಣ್ಣೆಹಳ್ಳಿ, ಯನಪೋಯ ಆಸ್ಪತ್ರೆ ಮಂಗಳೂರು, ಬಸವೇಶ್ವರ ಮೆಡಿಕಲ್ ಕಾಲೇಜು ಚಿತ್ರದುರ್ಗ, ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ಬೆಂಗಳೂರು, ದಾವಣಗೆರೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಗಳೂರು ತಾಲ್ಲೂಕು ಆರೋಗ್ಯ ಇಲಾಖೆ ಇವರುಗಳ ಸಹಯೋಗದೊಂದಿಗೆ ಬೃಹತ್ ಉಚಿತ ಆರೋಗ್ಯ ತಪಾಸಣೆ ಮಾ.17 ರಂದು ಬೆಳಿಗ್ಗೆ 10-30 ರಿಂದ ಸಂಜೆ ಆರು ಗಂಟೆಯವರೆಗೆ ಶರಣ ಬಸವೇಶ್ವರ ದಾಸೋಹ ಮಠ ದೊಣ್ಣೆಹಳ್ಳಿಯಲ್ಲಿ ನಡೆಯಲಿದೆ. ರಕ್ತದೊತ್ತಡ, ಮಧುಮೇಹ, ಅಸ್ತಮ, ಕೈಕಾಲು ನೋವು, ಮಕ್ಕಳ, ಮಹಿಳೆಯರ ಆರೋಗ್ಯ ಸಮಸ್ಯೆ, ಕಣ್ಣು, ಕಿವಿ, ಮೂಗು, ಗಂಟಲು, ಹೃದಯದ ಸಮಸ್ಯೆ ಕುರಿತು ತಪಾಸಣೆ ನಡೆಸಿ ಔಷಧಿಗಳನ್ನು ನೀಡಲಾಗುವುದು. ಸಾರ್ವಜನಿಕರು ಉಚಿತ ಆರೋಗ್ಯ ತಪಾಸಣೆ ಶಿಬಿರದ ಪ್ರಯೋಜನ ಪಡೆದುಕೊಳ್ಳುವಂತೆ ವೈ.ಎನ್.ಸಂತೋಷ್‌ಕುಮಾರ್, ಬಂಟನಹಳ್ಳಿ ಮಂಜುಸ್ವಾಮಿ ಇವರುಗಳು ವಿನಂತಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ: 9980907301, 7019321055 ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

### ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆಗೆ ಅವಕಾಶ

» ದಾವಣಗೆರೆ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ವತಿಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಐ.ಡಿ.ಎಸ್.ಪಿ ಕಾರ್ಯಕ್ರಮದಡಿಯಲ್ಲಿ ಬ್ಲಾಕ್ ಎಪಿಡೆಮಿಯೊಲಾಜಿಸ್ಟ್ (Block Epidemiologist) ಹುದ್ದೆಗಳಿಗೆ 2025 ರ ಜನವರಿ 27 ರಂದು ಸಂದರ್ಶನ ಏರ್ಪಡಿಸಿದ್ದು, ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಲಾಗಿದೆ. ಈ ಕುರಿತು ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ಸಮರ್ಥನೀಯ ದಾಖಲೆಗಳ ಜೊತೆಗೆ ಲಿಖಿತ ಆಲಕ್ಷೇಪಣೆಗಳನ್ನು ಪ್ರಕಟಗೊಂಡ 7 ದಿನಗಳೊಳಗಾಗಿ ಜಿಲ್ಲಾ ಸರ್ವೇಕ್ಷಣಾಧಿಕಾಗಳ ಕಚೇರಿಗೆ ಸಲ್ಲಿಸಲು ಪ್ರಕಟಣೆಯಲ್ಲಿ ಸೂಚಿಸಿದೆ.

### ಅರ್ಜಿ ಆಹ್ವಾನ

» ದಾವಣಗೆರೆ

ನಗರದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಲ್ಲಿ ತೆರವಾಗಿರುವ ಜಿಲ್ಲಾ ವಿಪತ್ತು ಪರಿಣಿತರ ಹುದ್ದೆಗೆ ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ, ಅರ್ಜಿ ಸಲ್ಲಿಸಲು ಮಾರ್ಚ್ 21 ಕೊನೆಯ ದಿನವಾಗಿದೆ. ಮಾಸಿಕ ರೂ.48400 ಗಳಂತೆ ಸಂಭಾವನೆ ನೀಡಲಾಗುತ್ತದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ವಿಜ್ಞಾನ, ಸಮಾಜ ವಿಜ್ಞಾನ, ಗ್ರಾಮೀಣಾಭಿವೃದ್ಧಿ, ಪರಿಸರ ವಿಜ್ಞಾನ, ನಿರ್ವಹಣೆಯಲ್ಲಿ ಸ್ನಾತಕೋತ್ತರ ಪದವಿ ಹೊಂದಿರಬೇಕು. ವಿಪತ್ತು ನಿರ್ವಹಣೆಯಲ್ಲಿ ಕನಿಷ್ಠ 3 ರಿಂದ 5 ವರ್ಷಗಳ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ವಿಪತ್ತು ನಿರ್ವಹಣಾ ಕಾಯ್ದೆ 2005 ಮತ್ತು ವಿವಿಧ ವಿಪತ್ತುಗಳ ಕುರಿತು ರಾಷ್ಟ್ರೀಯ ವಿಪತ್ತು ನಿರ್ವಹಣಾ ಮಾರ್ಗಸೂಚಿಗಳ ಬಗ್ಗೆ ತಿಳಿದಿರಬೇಕು. ಬಲವಾದ ಸಂವಹನ ಮತ್ತು ಪ್ರಸ್ತುತಿ ಕೌಶಲ್ಯಗಳನ್ನು ಹೊಂದಿರಬೇಕು. ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಪರಿಣಿತರಾಗಿರಬೇಕು. ಕಂಪ್ಯೂಟರ್ ಅಪ್ಲಿಕೇಷನ್ ಮತ್ತು ಇಂಟರ್ನೆಟ್ ಅಪ್ಲಿಕೇಶನ್‌ಗಳ ಉತ್ತಮ ಜ್ಞಾನ ಹೊಂದಿರಬೇಕು. ಆಸಕ್ತರು ಅರ್ಜಿಯನ್ನು ಸ್ವಯಂ-ದೃಢೀಕೃತ ಪ್ರತಿಗಳ ಸ್ವ-ವಿವರದೊಂದಿಗೆ ಉಪ ಆಯುಕ್ತರು, ವಿಪತ್ತು ನಿರ್ವಹಣಾ ಕೋಶ, ಉಪ ಆಯುಕ್ತರ ಕಚೇರಿ, ಪ್ಲಾಟ್ ಸಂಖ್ಯೆ.77, ಕರೂರ್ ಕೈಗಾರಿಕಾ ಪ್ರದೇಶ, ಹಳೆಯ ಪಿ.ಬಿ. ರಸ್ತೆ, ದಾವಣಗೆರೆ ಇಲ್ಲಿಗೆ ಇದೇ ಮಾ.21 ರೊಳಗೆ ನೊಂದಣಿ ಅಂಚೆ ಮೂಲಕ ಕಳುಹಿಸಬೇಕು.

# ಮನುಷ್ಯರಾಗಿ ಹುಟ್ಟಿ ದೈವತ್ವಕ್ಕೆ ಏರಿದವರು ಶ್ರೀಯೋಗಿ ನಾರೇಯಣ ಯತೀಂದ್ರರು: ಕುಮಾರಸ್ವಾಮಿ ಹೇಳಿಕೆ

» ಚಿತ್ರದುರ್ಗ





ಸಾಮಾನ್ಯ ಮನುಷ್ಯರಾಗಿ ಹುಟ್ಟಿ, ದೈವತ್ವಕ್ಕೆ ಏರಿದ ಮಹಾನ್ ಪುರುಷ ಶ್ರೀ ಯೋಗಿ ನಾರೇಯಣ ಯಂತೀದ್ರರು, ಕೈವಾರ ತಾತಯ್ಯ ಎಂದೇ ಪ್ರಸಿದ್ಧರಾಗಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಶುಕ್ರವಾರ ನಗರದ ತ.ರಾ.ಸು ರಂಗಮಂದಿರದಲ್ಲಿ ಆಯೋಜಿಸಲಾದ ಶ್ರೀ ಯೋಗಿ ನಾರೇಯಣ ಯತೀಂದ್ರ (ಕೈವಾರ ತಾತಯ್ಯ) ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಕೈವಾರ ತಾತಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಮನುಷ್ಯನಾಗಿ ಹುಟ್ಟಿ ದೇವಮಾನವರಾದ ಪ್ರಸಂಗ ಬಹಳ ವಿರಳವಾದುದ್ದು. 1726 ರಲ್ಲಿ ಮುದ್ದಮ್ಮ ಹಾಗೂ ಕೊಂಡಪ್ಪ ದಂಪತಿಗಳ ಮಗನಾಗಿ, ಈ ಹಿಂದಿನ ಕೋಲಾರ ಜಿಲ್ಲೆಯ ಕೈವಾರದಲ್ಲಿ ಯೋಗಿ ನಾರೇಯಣರು ಜನ್ಮಿಸುತ್ತಾರೆ. ಇವರು ಮೂಲ ಹೆಸರು ನಾರಾಯಣಪ್ಪ, ಬಲಿಜ ಸಮುದಾಯಕ್ಕೆ ಸೇರಿದ ಇವರು, ಕುಲ ಕಸುಬು ಬಳೆ ಮಾರುವ ವೃತ್ತಿ ಮಾಡುತ್ತಿದ್ದರು. ವ್ಯಾಪಾರದಲ್ಲಿ ದೇವರನ್ನು ಕಂಡು ಲೌಕಿಕ ಜಗತ್ತಿನಿಂದ ಅಲೌಕಿಕದೆಡೆಗೆ ನಾರಾಯಣಪ್ಪ ಸಾಗುತ್ತಾರೆ. ಬದುಕಿನ ಉದ್ದಕ್ಕೂ ಅನೇಕ ಪವಾಡಗಳನ್ನು ಮಾಡಿದ ಯೋಗಿ ನಾರೇಯಣರು ಸಮಾಜದಲ್ಲಿನ ಅಂಕು ಡೊಂಕುಗಳನ್ನು ತಿದ್ದಿದರು. ದಿವ್ಯ ಜ್ಞಾನದಿಂದ ಕಾಲಜ್ಞಾನ ರಚಿಸಿದರು. ಬಲಿಜ ಜನಾಂಗ ಸಂಖ್ಯೆಯಲ್ಲಿ ಕಡಿಮೆ ಇದ್ದರೂ, ಅತ್ಯಂತ ಸ್ವಾಭಿಮಾನಿ ಸಮಾಜವಾಗಿದೆ. ವ್ಯಾಪಾರ ಹಾಗೂ ಶಿಕ್ಷಣ ಪಡೆದು ಸಮಾಜದ ಮುಖ್ಯವಾಹಿನಿಗೆ ಬಂದಿದ್ದಾರೆ. ರಾಜಕೀಯವಾಗಿಯೂ ಜಾಗೃತರಾಗಿದ್ದಾರೆ. ಆದರೂ ಮಕ್ಕಳಿಗೆ ಉನ್ನತ ಶಿಕ್ಷಣ ನೀಡುವ ಮೂಲಕ ಇನ್ನೂ ಹೆಚ್ಚಿನ ಸ್ಥಾನಮಾನ ಗಳಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕರೆ ನೀಡಿದರು.

ಇಂದು ನಾಡಿನ ಸಂಸ್ಕೃತಿ ಅಳಿದು ಹೋಗುವ ಅಂಚಿನಲ್ಲಿದೆ. ಇದನ್ನು ಮತ್ತೆ ಕಟ್ಟಿಕೊಡಬೇಕಾದ ಸಾಮಾಜಿಕ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಮಕ್ಕಳಿಗೆ ಉತ್ತಮ ಸಂಸ್ಕಾರಯುತ ಶಿಕ್ಷಣ ನೀಡಿ ಅವರನ್ನು ಉತ್ತಮ ನಾಗರಿಕರನ್ನಾಗಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಸಾಹಿತಿ ಹುರುಳಿ ಬಸವರಾಜ್ ಉಪನ್ಯಾಸ ನೀಡಿ, ಶ್ರೀ ಯೋಗಿ ನಾರೇಯಣ ಯತೀಂದ್ರರು ರಚಿಸಿದ ಕಾಲಜ್ಞಾನ ಆಧುನಿಕ ಯುಗದಲ್ಲಿ ಸಾಮಾಜಿಕ ಅವ್ಯವಸ್ಥೆ, ಭವಿಷ್ಯದಲ್ಲಿನ ಪ್ರಳಯದ ಮುನ್ಸೂಚನೆಗಳನ್ನು ನೀಡಿದೆ. ಎಲ್ಲ ಆಧುನಿಕ ಸವಲತ್ತುಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿರುವ ಮನುಷ್ಯನ ಬದುಕು ಅಧಃಪತನಕ್ಕೆ ಜಾರಿದೆ. ಸಂಬಂಧಗಳು ಸಡಿಲವಾಗುತ್ತಿವೆ. ಸಂಕೋಚ ಬದುಕುತ್ತಿರುವ, ಮುನ್ನಡೆಯೇ ಕಾಣದೇ ಆತ್ಮಹತ್ಯೆ ಅಂತಹ ಪ್ರಯತ್ನಗಳಿಗೆ ಯುವ ಜನರು ತುತ್ತಾಗುತ್ತಿದ್ದಾರೆ. ಈ ಎಲ್ಲಾ ಅಂಶಗಳು ಸಹ ನಾರೇಯಣ ರಚಿಸಿದ ಕಾಲಜ್ಞಾನದಲ್ಲಿ ಅಡಗಿವೆ. ಇವುಗಳನ್ನು ತಿಳಿದುಕೊಳ್ಳುವ ಮೂಲಕ, ತಪ್ಪುಗಳನ್ನು ಸರಿಪಡಿಸಿಕೊಂಡು ಜೀವನವನ್ನು ನಡೆಸಿದರೆ, ಸಮಾಜ ಉನ್ನತಿ ಸಾಧಿಸಲಿದೆ ಎಂದು ಅಭಿಪ್ರಾಯಪಟ್ಟರು.



ಕೈವಾರ, ತುಂಬಾ ಐತಿಹ್ಯಗಳು ಇರುವ ಸ್ಥಳವಾಗಿದೆ. ರಾಮಾಯಣ, ಮಹಾಭಾರತ ನಂಟು ಕೈವಾರ ಪಟ್ಟಣಕ್ಕಿದೆ. ಮಹಿಷಾಸುರನನ್ನು ಕೊಂದು ದೇವಿ ತನ್ನ ಉಗ್ರರೂಪವನ್ನು ತೊರೆದು ಶಾಂತವಾದ ಸ್ಥಳ ಕೈವಾರ ಎಂದು ಪುರಾಣಗಳಲ್ಲಿ ಹೇಳಲಾಗಿದೆ. ಇಂತಹ ಸ್ಥಳದಲ್ಲಿ ಜನಿಸಿದ ನಾರಾಯಣಪ್ಪ ಮುಂದೆ ಶ್ರೀಯೋಗಿನಾರೇಯಣ ಯತೀಂದ್ರರಾಗಿ ಕೈವಾರವನ್ನು ಕಾರ್ಯಕ್ಷೇತ್ರವನ್ನಾಗಿಸಿಕೊಂಡರು ಎಂದು ಹೇಳಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ : ಜಯಂತಿ ಅಂಗವಾಗಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.85 ಕ್ಕಿಂತ ಹೆಚ್ಚು ಅಂಕ ಪಡೆದ ಬಲಿಜ ಸಮುದಾಯ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಗುರುನಾಥ್ ಸ್ವಾಗತಿಸಿದರು. ವಿಕಲಚೇತನ ಪ್ರತಿಭೆ ರಕ್ಷಾ ಕುರುಬರಹಳ್ಳಿ ಪ್ರಾರ್ಥಿಸಿದರು. ಗಾಯಕ ಮುತ್ತುರಾಜ ಅವರ ತಂಡ ನಾಡಗೀತೆ ಪ್ರಸ್ತುತ ಪಡಿಸುವುದರೊಂದಿಗೆ ಗೀತಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ನವೀನ್ ಮಸ್ಕಲ್ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ನಗರಸಭೆ ಆಯುಕ್ತೆ ಎಂ.ರೇಣುಕಾ, ಜಿಲ್ಲಾ ಶ್ರೀ ಯೋಗಿ ನಾರೇಯಣ ಯಂತೀದ್ರ ಬಲಿಜ ಸಂಘದ ಅಧ್ಯಕ್ಷ ಎಂ.ಎ.ಸೇತುರಾಮ್, ಕಾರ್ಯದರ್ಶಿ ಎಂ.ಗಂಗಣ್ಣ, ತಾಲ್ಲೂಕು ಸಂಘದ ಅಧ್ಯಕ್ಷ ಎಂ.ಜಿ.ಸೂರ್ಯನಾರಾಯಣ, ಶ್ರೀ ಯೋಗಿನಾರೇಯಣ ಸೌಹಾರ್ದ ಪತ್ತಿನ ಸಹಕಾರ ಬ್ಯಾಂಕ್ ಅಧ್ಯಕ್ಷ ಎಂ.ಕೆ.ಪ್ರಹ್ಲಾದ್, ಬೋಮೇನಹಳ್ಳಿ ಶ್ರೀ ಯೋಗಿನಾರೇಯಣ ಯತೀಂದ್ರ ವಿದ್ಯಾಸಂಸ್ಥೆ ಅಧ್ಯಕ್ಷ ಎಂ.ವಿ.ರಾಮದಾಸಪ್ಪ, ಬೋಮೇನಹಳ್ಳಿ ಶ್ರೀ ಯೋಗಿನಾರೇಯಣ ಯತೀಂದ್ರ ಸಂಘದ ಅಧ್ಯಕ್ಷ ವಿರೂಪಾಕ್ಷಪ್ಪ ಸೇರಿದಂತೆ ಬಲಿಜ ಸಮಾಜದ ಮುಖಂಡರು ಉಪಸ್ಥಿತದ್ದರು.

ಅದ್ದೂರಿ ಮೆರವಣಿಗೆ : ಕೈವಾರ ತಾತಯ್ಯ ಜಯಂತಿ ಅಂಗವಾಗಿ ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇವಸ್ಥಾನ ಬಳಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅದ್ದೂರಿ ಮೆರವಣಿಗೆ ಚಾಲನೆ ನೀಡಿದರು. ಶ್ರೀ ಯೋಗಿನಾರೇಯಣ ಯತೀಂದ್ರ, ಬಲಿಚಕ್ರವರ್ತಿ, ಶ್ರೀಕೃಷ್ಣದೇವರಾಯ, ಜ್ಯೋತಿಬಾಪುಲೆ, ಸಾವಿತ್ರಿಬಾಯಿ ಪುಲೆ ಅವರ ಭಾವಚಿತ್ರಗಳನ್ನು ಮೆರವಣಿಗೆಯಲ್ಲಿದ್ದವು. ಸಾಂಸ್ಕೃತಿಕ ಕಲಾ ತಂಡಗಳು, ಬಲಿಜ ಮಹಿಳಾ ಸಂಘಗಳ ಸದಸ್ಯರು ಪಾಲ್ಗೊಂಡಿದ್ದರು. ಮೆರವಣಿಗೆ ಗಾಂಧಿ ವೃತ್ತ, ಎಸ್.ಬಿ.ಐ, ಅಂಬೇಡ್ಕರ್ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಿತು.

# ಅಟಲ್ ಒಡನಾಡಿ ಹೊಂದಿದ್ದ ರಾಜ್ಯದ ಹಿರಿಯ ಕಾರ್ಯಕರ್ತರಿಗೆ ಸಂಸದರಿಂದ ಗೌರವ ಸಮರ್ಪಣೆ

» ಚಿತ್ರದುರ್ಗ


ರಾಜ್ಯಾದ್ಯಂತ ನಡೆಯುತ್ತಿರುವ ಮಾಜಿ ಪ್ರಧಾನಿ ಭಾರತ ರತ್ನ ದಿ.ಅಟಲ್ ಬಿಹಾರಿ ವಾಜಿಪೇಯಿ ಅವರ ಜನ್ಮ ಶತಮಾನೋತ್ಸವ ಆಚರಣೆ ನಿಮಿತ್ತ ಅಟಲ್ ಜೀ ಅವರೊಂದಿಗೆ ಒಡನಾಡಿ ಹೊಂದಿದ್ದ ರಾಜ್ಯದ ಹಿರಿಯ ಕಾರ್ಯಕರ್ತರ ಮನೆಗೆ ಭೇಟಿ ನೀಡುವ ಕಾರ್ಯಕ್ರಮದ ಅಂಗವಾಗಿ ಬಿಜೆಪಿಯ ಹಿರಿಯ ನಾಯಕರಾದ ಎಂ.ಪಿ.ಗುರುರಾಜ್ ಹಾಗೂ ಎಂ. ರಾಘವೇಂದ್ರ ರವರಿಗೆ ಇಂದು ಅವರ ನಿವಾಸದಲ್ಲಿ ಅವರ ಪತ್ನಿ ಸಮೇತರಾಗಿ ಜಿಲ್ಲಾ ಸಮಿತಿವತಿಯಿಂದ ಗೌರವ ಸಮರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಶಾಲು, ಹಾರ ಹಾಗೂ ಅಟಲ್‌ಜೀಯವರ ಭಾವಚಿತ್ರ ಇರುವ ಸ್ಮರಣ ಸಂಚಿಕೆಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಇರ್ವರು ಅಟಲ್‌ಜೀಯವರ ಜೊತೆಯಲ್ಲಿ ಕಳೆದ ಸಮಯವನ್ನು ನೆನಪಿಸಿಕೊಂಡು ಅವರು 1986-87ನೇ ಸಾಲಿನಲ್ಲಿ ಕಾರ್ಯಕ್ರಮದ ನಿಮ್ಮಿತ್ತ ದಾವಣಗೆರೆ ಹಾಗೂ ಬೆಂಗಳೂರಿಗೆ ಬಂದಾಗ ಅಲ್ಲಿಗೆ ಹೋಗಿ ಅವರನ್ನು ಭೇಟಿ ಮಾಡಿ ಚಿತ್ರದುರ್ಗ ಜಿಲ್ಲಾ ಬಿಜೆಪಿ ಘಟಕದಿಂದ ಸನ್ಮಾನವನ್ನು ಮಾಡಲಾಯಿತೆಂದು ನೆನಪಿಸಿಕೊಂಡರು.



ಈ ಸಂದರ್ಭದಲ್ಲಿ ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ ಕಾರಜೋಳ, ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ಮಧುಗಿರಿ ಜಿಲ್ಲಾ ಅಧ್ಯಕ್ಷ ಹನುಮಂತೇಗೌಡ, ನಗರಾಬೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಬದಿನಾಥ್, ರಾಜ್ಯ ರೈತ ಮೋರ್ಚಾದ ಕಾರ್ಯದರ್ಶಿ ಮಲ್ಲಿಕಾರ್ಜುನ್, ಜಿಲ್ಲಾ ಖಂಜಾಚಿ ಮಾಧುರಿ ಗೀರೀಶ್, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಜಿಲ್ಲಾ ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ ಯಾದವ್, ಜಿಲ್ಲಾ ಕಾರ್ಯಕಾರಿನಿ ಸದಸ್ಯ ಕೆ.ಶಿವಣ್ಣಚಾರ್ ಉಪಸ್ಥಿತರಿದ್ದರು.

## ಬಾಲಕಿ ಮೇಲೆ ಅತ್ಯಾಚಾರ: ಆರೋಪಿ ಬಂಧಿಸುವಂತೆ




» ಚಿತ್ರದುರ್ಗ

ಅಗಸರಹಳ್ಳಿಯಲ್ಲಿ ಏಳು ದಿನಗಳ ಹಿಂದೆ ಮೂರನೆ ತರಗತಿ ಬಾಲಕಿ ಮೇಲೆ ಸಾಧಿಕ್ ಎಂಬುವನು ಅತ್ಯಾಚಾರವೆಸಗಿರುವುದನ್ನು ಖಂಡಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರಿಗೆ ಮನವಿ ಸಲ್ಲಿಸಲಾಯಿತು. ಸಂಜೆ ಆಟವಾಡುತ್ತಿದ್ದ ಬಾಲಕಿಗೆ ಚಾಕಲೇಟ್, ಐಸ್‌ಕ್ರೀಂ ಆಸೆ ತೋರಿಸಿ ಗುಡ್ಡದ ಮೇಲೆ ಕರೆದುಕೊಂಡು ಹೋಗಿ ಅತ್ಯಾಚಾರವೆಸಗಿರುವ ಸಂಬಂಧ ಎಫ್.ಐ.ಆರ್.ದಾಖಲಾಗಿದ್ದರೂ ಇದುವರೆವಿಗೂ ಅತ್ಯಾಚಾರಿಯನ್ನು ಪೊಲೀಸರು ಬಂಧಿಸಿಲ್ಲ. ಅತ್ಯಾಚಾರ ಪ್ರಕರಣಗಳು ಪದೆ ಪದೆ ಮರುಕಳಿಸುತ್ತಿದ್ದರು ರಾಜ್ಯ ಸರ್ಕಾರವಾಗಲಿ, ಪೊಲೀಸ್ ಇಲಾಖೆಯಾಗಲಿ ಎಚ್ಚೆತ್ತುಕೊಳ್ಳುತ್ತಿಲ್ಲ. ಪೋಕ್ಸೋ ಕಾಯಿದೆಯಡಿ ಕಠಿಣ ಶಿಕ್ಷೆ ವಿಧಿಸುವಂತೆ ಪ್ರತಿಭಟನೆ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ನಿಸಾರ್ ಅಹಮದ್, ಮುಜಾಹಿದ್, ನಾಗೇಶ್, ಅಖಿಲೇಶ್ ಶಶಿ, ಯರ್ರಿಸ್ವಾಮಿ, ವಿಜಯ್‌ಬಾಬು, ಮಹಮದ್ ರಫಿ, ಅವಿನಾಶ್ ಇವರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ರಂಭಾಪುರಿ ಶ್ರೀಗಳು ಹಾಗೂ ಕೇದಾರಸ್ವಾಮಿ ಹೇಳಿಕೆಗೆ ಖಂಡನೆ

» ಚಿತ್ರದುರ್ಗ




ಹಿರಿಯರು, ಅಧ್ಯಯನ ಶೀಲರು, ವಯೋವೃದ್ಧರು, ಅತ್ಯುತ್ತಮ ಬರಹಗಾರರು, ಚಿಂತಕರಾದ ಗೋರುಚರನ್ನು ಅವನಿಗೆ ಧರ್ಮದ ಇತಿಹಾಸವೇ ಗೊತ್ತಿಲ್ಲ, ವಯೋವೃದ್ಧ, ಅನುಭವದ ಕೊರತೆ ಇದೆ ಎಂದೆಲ್ಲ ಏಕವಚನದಲ್ಲಿ ಟೀಕಿಸಿ ಗೋರೂಚರ ಅಭಿಪ್ರಾಯಕ್ಕೆ ತಿರುಗೇಟು ನೀಡಲು ಹೋಗಿ ಒಂದು ಸಮಾಜದ ಗುರುಗಳಾದ ಬಾಳೆಹೊನ್ನೂರಿನ ರಂಭಾಪುರಿ ಶ್ರೀಗಳು ಹಾಗೂ ಕೇದಾರಸ್ವಾಮಿಗಳು ತಮ್ಮ ಸ್ಥಾನದ ಎಲ್ಲೆ ಮೀರಿ ಅಸಹನೆಯ ಮಾತುಗಳನ್ನಾಡಿರುವುದು ಅವರ ವ್ಯಕ್ತಿತ್ವಕ್ಕೆ ಶೋಭೆಯಲ್ಲ ಇದನ್ನು ಜಾಗತಿಕ ಲಿಂಗಾಯತ ಮಹಾಸಭಾ (ರಿ) ಚಿತ್ರದುರ್ಗ ಜಿಲ್ಲಾ ಘಟಕ ಖಂಡಿಸುತ್ತದೆ. ಈ ಕೂಡಲೇ ಶ್ರೀಗಳು ಗೋರುಚರವರ ಕ್ಷೇಮ ಕೋರಬೇಕು ಎಂದು ಒತ್ತಾಯಿಸಿದೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷರಾದ ಜೆ.ಡಿ.ಕೆಂಚವೀರಪ್ಪ ಬೆಂಗಳೂರಿನ ಬಸವ ಸಮಿತಿಯ ಅನುಭವ ಮಂಟಪದಲ್ಲಿ, ಜಾಗತಿಕ ಲಿಂಗಾಯಿತ ಮಹಾಸಭಾ, ಅಖಿಲ ಭಾರತ ಲಿಂಗಾಯತ ಮಠಾಧೀಶರ ಒಕ್ಕೂಟ, ಬಸವದಳ ಹಾಗೂ ಎಲ್ಲ ಬಸವಪರ ಸಂಘನೆಗಳ ನೇತೃತ್ವದಲ್ಲಿ ವಚನ ದರ್ಶನ ಮಿತ್ಯ/ಸತ್ಯ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸಿದ್ದ ಶ್ರೀಗಳು ಹಿರಿಯ ವಿದ್ವಾಂಸರಾದ ಗೋರೂರು ಚನ್ನಬಸಪ್ಪನವರು ವೀರಶೈವ ಎಂಬುವುದು ಧರ್ಮವಲ್ಲ, ಲಿಂಗಾಯತವೇ ನಿಜವಾದ ಧರ್ಮ ಎಂದು ಹೇಳಿರುವುದು ಸರಿ. ಎಂಬ ಗೋರೂಚರ ಅಭಿಪ್ರಾಯಕ್ಕೆ ತಿರುಗೇಟು ನೀಡಲು ಹೋಗಿ ಒಂದು ಸಮಾಜದ ಗುರುಗಳಾದವರು ತಮ್ಮ ಸ್ಥಾನದ ಎಲ್ಲೆ ಮೀರಿ ಅಸಹನೆಯ ಮಾತುಗಳನ್ನಾಡಿರುವುದು ಅವರ ವ್ಯಕ್ತಿತ್ವಕ್ಕೆ ಶೋಭೆಯಲ್ಲ, ಹಾಗೇ ಶ್ರೀಗಳು ವೀರಶೈವವೇ ನಿಜವಾದ ಧರ್ಮ ಲಿಂಗಾಯಿತ ಎನ್ನುವುದು ರೂಡಿಯಿಂದ ಬಂದಿದ್ದು ಎಂದು ಹೇಳಿದ್ದಾರೆ. ವೀರಶೈವ ಧರ್ಮ ಎಂಬುದಕ್ಕೆ ಯಾವುದೇ ಇತಿಹಾಸ ದಾಖಲೆಗಳು ಇಲ್ಲ, ಜಗತ್ತಿನಲ್ಲಿ ಯಾವ ಧರ್ಮ ಗುರುಗಳು ಕಲ್ಲಿನಲ್ಲಿ ಉದ್ಭವಿಸಿಲ್ಲ, ನೀವೇ ಬರೆಸಿದ ವೀರಶೈವ ಧರ್ಮ ಗ್ರಂಥ ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ರೇಣುಕ ಒಬ್ಬರೇ ಗುರುಗಳಾಗಿದ್ದರೆ. ಆದರೆ ಇನ್ನುಳಿದ ನಾಲ್ಕು ಚತುರಾಚಾರ್ಯರು ಯಾವಾಗ ಎಲ್ಲಿಂದ ಉದ್ಭವವಾದರು ಎನ್ನುವುದು ತಿಳಿಯದು ನಿಮ್ಮ ಆಚರಣೆಗಳಿಗೂ ಲಿಂಗಾಯಿತರ ಆಚರಣೆಗಳಿಗೂ ಬಹಳಷ್ಟು ವ್ಯತ್ಯಾಸಗಳು ಇವೆ ಎಂದಿದ್ದಾರೆ.

ಜಾಗತಿಕ ಲಿಂಗಾಯತ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಜಿ.ಟಿ.ನಂದೀಶ್ ಮಾತನಾಡಿ, ಪುರಾಣದ ಕಾಲ್ಪನಿಕ ಕಥೆಗಳನ್ನು ಹೇಳುವ ಮೂಲಕ ಇಲ್ಲಿಯವರೆಗೂ ಜನರನ್ನು ವಂಚಿಸಿದ್ದು ಸಾಕು. ಜನ ನಿಮ್ಮನ್ನು ನಂಬುವ ಸ್ಥಿತಿಯಲ್ಲಿ ಇಲ್ಲ. ಲಿಂಗಾಯಿತವೇ ನಿಜವಾದ ಧರ್ಮ, ಬಸವಾದಿ ಶರಣರಿಂದ ಲಿಂಗಾಯಿತ ಧರ್ಮ ಸ್ಥಾಪಿತವಾಗಿದೆ. ಇದಕ್ಕೆ ಇಪ್ಪತ್ತೂರು ಸಾವಿರ ವಚನಗಳೇ ಸಾಕ್ಷಿ. ಲಿಂಗಾಯಿತ ಧರ್ಮ ಸಮಾನತೆಯ ಹಾಗೂ ಕಾಯಕ ಮತ್ತು ದಾಸೋಹ ತತ್ವದ ಆಧಾರದ ಮೇಲೆ ಸ್ಥಾಪಿತವಾಗಿದೆ. ಇದನ್ನು ಯಾರೂ ಅಲ್ಲಗಳೆಯಲಾಗದು ಇದಕ್ಕೆ ಸಾಕಷ್ಟು ಐತಿಹಾಸಿಕ ಪುರಾವೆಗಳು ಇವೆ. ನಿಮಗೆ ವೀರಶೈವವೇ ನಿಜವಾದ ಧರ್ಮ ಎನಿಸಿದರೆ, ನಮ್ಮ ಅಭ್ಯಂತರವಿಲ್ಲ, ನಿಮ್ಮ ಆಚರಣೆಗಳನ್ನು ನೀವು ಆಚರಿಸಿಕೊಂಡು ಹೋಗಿ. ನಿಮ್ಮ ನಿಮ್ಮ ಧಾರ್ಮಿಕ ನಂಬಿಕೆಗಳನ್ನು ಆಚರಿಸಲು ಸಂವಿಧಾನ ನಿಮಗೆ ಸ್ವಾತಂತ್ರ್ಯ. ನೀಡಿದೆ ಅದಕ್ಕೆ ನಾವು ಅಡ್ಡಿ ಪಡಿಸುವುದಿಲ್ಲ.

## ಫಾಸ್ಟ್ ನ್ಯೂಸ್

### 15 ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ಇವರ ಸಹಯೋಗದಲ್ಲಿ ಮಾರ್ಚ್ 15 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಹದಡಿ ರಸ್ತೆಯಲ್ಲಿರುವ ಸರ್ಕಾರಿ ಐ.ಟಿ.ಐ ಕಾಲೇಜು ಆವರಣದಲ್ಲಿ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ.ಶರಣಪ್ರಕಾಶ ರುದ್ರಪ್ಪ ಪಾಟೀಲ್ ಘನಉಪಸ್ಥಿತರಿರುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶಿವಕಾಂತಮ್ಮ ನಾಯಕ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಸಗೋಡು ಜಯಸಿಂಹ, ರಾಜ್ಯ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವನಾಯ್ಕ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕಾರ್ಯದರ್ಶಿ ಏಕ್ ರೂಪ್ ಕೌರ್, ದಾವಣಗೆರೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ರಾಷ್ಟ್ರೀಯ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಭಿಯಾನ ನಿರ್ದೇಶಕರಾದ ಪಿ.ಐ.ಶ್ರೀವಿದ್ಯಾಶ್ರೀ, ವ್ಯವಸ್ಥಾಪಕ ನಿರ್ದೇಶಕರಾದ ಡಾ.ರಾಗಪ್ರಿಯ.ಆರ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ ಬಿ. ಇಟ್ನಾಳ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಶಿವಕುಮಾರ ಮಲ್ಲಾಡದ, ಐ.ಟಿ.ಐ ಕಾಲೇಜಿನ ಪ್ರಾಚಾರ್ಯರರಾದ ಏಕನಾಥ.ಎನ್ ಭಾಗವಹಿಸುವರು.

### ಭಾರತೀಯ ಸೇನೆಯ ಅಗ್ನಿವೀರ್ ನೇಮಕಾತಿ ಪರೀಕ್ಷೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಅಗ್ನಿಪಥ್ ಯೋಜನೆಯಡಿ ಅಗ್ನಿವೀರ್ ನೇಮಕಾತಿ ಪರೀಕ್ಷೆಗೆ ಬಾಗಲಕೋಟೆ, ಗದಗ, ವಿಜಯಪುರ, ಧಾರವಾಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಹಾವೇರಿ, ಚಿಕ್ಕಮಂಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಅವಿವಾಹಿತ ಪುರುಷ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನೋಂದಣಿಯು ಏಪ್ರಿಲ್ 10 ರವರೆಗೆ ಇರುತ್ತದೆ. ನೋಂದಣಿ ಪೋರ್ಟಲ್ WWW. JOININDINARMY. NIC.IN ಹಾಗೂ ಆನ್ ಲೈನ್ ಪರೀಕ್ಷೆಯು ಜೂನ್ 2025 ರಲ್ಲಿ ನಡೆಯುವ ಸಾಧ್ಯತೆ ಇದ್ದು, ಪರೀಕ್ಷೆಯ ದಿನಾಂಕವನ್ನು ನಂತರ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮಂಗಳೂರು ಸೇನಾ ನೇಮಕಾತಿ ಕಚೇರಿ ದೂ.ಸಂ:0824-2951279 ಹಾಗೂ ಇ-ಮೇಲ್ aromangalore2021@gmail.com ಸಂಪರ್ಕಿಸಲು ಇಲಾಖೆಯ ಉಪನಿರ್ದೇಶಕರಾದ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

### ನಾಯಕನಹಟ್ಟಿ ಜಾತ್ರೆ: ಪ್ರಾಣಿ ಬಲಿ ನಿಷೇಧ

» ಚಿತ್ರದುರ್ಗ

ಕರ್ನಾಟಕ ಪ್ರಾಣಿ ಬಲಿ ನಿಷೇಧ ಕಾಯ್ದೆ ಅನ್ವಯ ದೇವಸ್ಥಾನ ಹಾಗೂ ದೇವಸ್ಥಾನದ ಅವರಣದಲ್ಲಿ ಪ್ರಾಣಿ ಬಲಿ ನೀಡುವುದು ಕಾನೂನಿಗೆ ವಿರುದ್ಧವಾಗಿರುತ್ತದೆ. ಮಾರ್ಚ್ 16 ರಂದು ನಾಯಕನಹಟ್ಟಿಯ ಶ್ರೀ ಗುರು ತಿಪ್ಪೆರುದ್ರಸ್ವಾಮಿ ದೊಡ್ಡ ರಥೋತ್ಸವ ಜರುಗಲಿದ್ದು, ಇದಕ್ಕೆ ಪೂರಕವಾಗಿ ಮಾರ್ಚ್ 09 ರಿಂದ 17 ರವರೆಗೆ ಜಾತ್ರ ನಡೆಯಲಿದೆ. ಈ ಜಾತ್ರೆಯ ಸಂದರ್ಭದಲ್ಲಿ ದೇವಸ್ಥಾನದ ಅವರಣಕ್ಕೆ ಪ್ರಾಣಿಗಳನ್ನು ಹಾಗೂ ಮಾರಕಾಸ್ತ್ರಗಳನ್ನು ತರುವುದು, ಪ್ರಾಣಿ ಬಲಿ ನೀಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಟಿ. ವೆಂಕಟೇಶ ಆದೇಶ ಹೊರಡಿಸಿದ್ದಾರೆ.

### 15ಕ್ಕೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಇದೇ 15ರ ಶನಿವಾರ ಮಧ್ಯಾಹ್ನ 12ಕ್ಕೆ ನಗರದ ವಕೀಲರ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ. ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಎನ್.ಎಸ್.ಸಂಜಯ್‌ಗೌಡ ಕಾರ್ಯಕ್ರಮ ಉದ್ಘಾಟಿಸುವರು.

# ಎಂಪಿ ರೇಣುಕಾಚಾರ್ಯ ಕಾಂಗ್ರೆಸ್ ಸೇರ್ಪಡೆ?

ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕಾಂಗ್ರೆಸ್ ಶಾಸಕರಿಗೆ ಆಯೋಜಿಸಿದ್ದ ಔತಣಕೂಟದಲ್ಲಿ ಬಿಜೆಪಿ ಶಾಸಕರು ಕೂಡ ಕಾಣಿಸಿಕೊಂಡಿದ್ದು ಅಚ್ಚರಿ ಮೂಡಿಸಿದೆ. ಇದರ ನಡುವೆ ಮತ್ತೊಂದು ಮಹತ್ವದ ಬೆಳವಣಿಗೆ ನಡೆದಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಬಣದಲ್ಲಿ ಗುರುತಿಸಿಕೊಂಡಿರುವ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಅವರು ಕಾಂಗ್ರೆಸ್ ಸೇರಿಕೊಳ್ಳುತ್ತಿದ್ದಾರಾ ಎಂಬ ಚರ್ಚೆಗಳು ಜೋರಾಗಿವೆ.

ರೇಣುಕಾಚಾರ್ಯ ಅವರು ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿರುವುದು ಇದಕ್ಕೆ ಪುಷ್ಟಿ ನೀಡುತ್ತಿದೆ.

ಈ ಫೋಟೋ ಅನ್ನು ಡಿ.ಕೆ.ಶಿವಕುಮಾರ್ ಅವರೇ ಪೋಸ್ಟ್ ಮಾಡಿಕೊಂಡಿರುವುದು ಕುತೂಹಲ ಅಚ್ಚರಿ ಮೂಡಿಸಿದೆ. ಸದಾ ಕಾಂಗ್ರೆಸ್ ವಿರುದ್ಧ ಆರೋಪಗಳನ್ನು ಮಾಡುತ್ತಿದ್ದ ಎಂಪಿ ರೇಣುಕಾಚಾರ್ಯ ಅವರು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿರುವುದು ಹಲವು ಪ್ರಶ್ನೆಗಳನ್ನು ಮುಂದಿಟ್ಟಿದೆ. ರೇಣುಕಾಚಾರ್ಯ



ಅವರು ಬಿಜೆಪಿ ತೊರೆದು, ಕಾಂಗ್ರೆಸ್ ಸೇರಿಕೊಳ್ಳುತ್ತಿದ್ದಾರೆ ಎಂದೂ ರಾಜಕೀಯ ವಲಯದಲ್ಲಿ ಗುಸುಗುಸು ಕೇಳಿಬರುತ್ತಿದೆ. ಆದರೆ, ಮಾಜಿ ಸಚಿವರಾದ ಎಂಪಿ ರೇಣುಕಾಚಾರ್ಯ ಅವರು ಇಂದು ನನ್ನನ್ನು ಭೇಟಿಯಾಗಿ ಶುಭ ಹಾರೈಸಿದರು ಎಂದು ಡಿ.ಕೆ ಶಿವಕುಮಾರ್ ಫೋಟೋ ಹಂಚಿಕೊಂಡಿರುವುದು ಚರ್ಚೆಗೆ ಗ್ರಾಸವಾಗಿದೆ.

ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ ಶಿವಕುಮಾರ್ ಅವರು ಐದು ವರ್ಷ ಪೂರೈಸುತ್ತಿರುವ ಹಿನ್ನೆಲೆ ಕಾಂಗ್ರೆಸ್ ನಾಯಕರೆಲ್ಲರೂ ಇವರನ್ನು ಅಭಿನಂದಿಸಿದ್ದರು. ಆದರೆ, ಬಿಜೆಪಿ ನಾಯಕರಾದ ರೇಣುಕಾಚಾರ್ಯ ದಿಢೀರನೆ ಡಿಕೆ ಶಿವಕುಮಾರ್ ಅವರನ್ನು ಭೇಟಿಯಾಗಿರುವುದು ರಾಜ್ಯ ರಾಜಕಾರಣದಲ್ಲಿ ಸಂಚಲನ ಸೃಷ್ಟಿಸಿದೆ. ಸದ್ದಿಲ್ಲದೆ ಕಾಂಗ್ರೆಸ್ ಸೇರಲು ರೇಣುಕಾಚಾರ್ಯ ನಿರ್ಧರಿಸಿದ್ದು, ಕೆಪಿಸಿಸಿ ಅಧ್ಯಕ್ಷರನ್ನು ಅಭಿನಂದಿಸುವ ನೆಪದಲ್ಲಿ ಮಹತ್ವದ ಚರ್ಚೆ ನಡೆಸಿದ್ದಾರೆ. ಕಾಂಗ್ರೆಸ್ ಸೇರುವ ಬಗ್ಗೆಯೂ ಡಿಕೆಶಿ ಜೊತೆ ಮಾತನಾಡಿದ್ದಾರೆ ಎಂದು ಹೇಳಲಾಗುತ್ತಿದೆ.

ಅಚ್ಚರಿಯೆಂದರೆ ರೇಣುಕಾಚಾರ್ಯ ಅವರು ಇಂದು ಕಾಂಗ್ರೆಸ್ ಸರ್ಕಾರವನ್ನು ಟೀಕಿಸಿದ್ದಾರೆ. ರಾಜ್ಯವನ್ನು ದಿವಾಳಿ ಮಾಡಿರುವುದರ ಜೊತೆಗೆ ಸಾಲದ ಹೊರೆಯನ್ನು ಹೊರಿಸುತ್ತಿರುವ ಕಾಂಗ್ರೆಸ್ ಸರ್ಕಾರ ಸಿದ್ದರಾಮಯ್ಯ ಸರ್ಕಾರ ಮಾಡಿರುವ ಸಾಲದಿಂದ ರಾಜ್ಯದ ಪ್ರತಿ ಜನರ ತಲೆಯ ಮೇಲೆ □1 ಲಕ್ಷ ಸಾಲದ ಹೊರೆ ಹೊರಿಸಿದ್ದು ಕಾಂಗ್ರೆಸ್ಸಿನ ಮುಂದುವರೆದ ಗ್ಯಾರಂಟಿಯಾಗಿದೆ ಎಂದು ವಾಗ್ದಾಳಿಯೂ ನಡೆಸಿದ್ದು, ಇದರ ನಡುವೆಯೇ ಅವರು ಕಾಂಗ್ರೆಸ್ ಅಧ್ಯಕ್ಷರನ್ನು ಭೇಟಿಯಾಗಿರುವುದು ಕುತೂಹಲ ಮೂಡಿಸಿದೆ.

ಕಾಂಗ್ರೆಸ್ ಕೂಡ ತಮ್ಮ ಪಕ್ಷಕ್ಕೆ ಯಾರಾದರೂ ಬರಬಹುದು ಎಂದು ಓಪನ್ ಆಫರ್ ಕೊಟ್ಟಿದೆ. ಹಾಗಾಗಿ ಬೇರೆ ಪಕ್ಷಗಳಿಂದ ಕಾಂಗ್ರೆಸ್‌ಗೆ ಬಂದ ಕೆಲವರ ಬದುಕು ಕೂಡ ಬದಲಾಗಿದೆ. ಅಲ್ಲದೆ ಬಿಜೆಪಿ ಶಾಸಕರಾದ ಶಿವರಾಂ ಹೆಬ್ಬಾರ್, ಎಸ್.ಟಿ.ಸೋಮಶೇಖರ್ ಅವರು ಬಿಜೆಪಿಯಲ್ಲಿದ್ದುಕೊಂಡೇ ಕಾಂಗ್ರೆಸ್ ಪರ ಬ್ಯಾಟಿಂಗ್ ಬೀಸುತ್ತಿದ್ದಾರೆ. ಪರೋಕ್ಷವಾಗಿ ಕಾಂಗ್ರೆಸ್ ಸೇರುವ ಸುಳಿವನ್ನು ನೀಡುತ್ತಲೇ ಇದ್ದಾರೆ. ಡಿಕೆಶಿ ಔತಣಕೂಟದಲ್ಲೂ ಇವರು ಕಾಣಿಸಿಕೊಂಡಿದ್ದರು. ಇದರ ಬೆನ್ನಲ್ಲೇ ರೇಣುಕಾಚಾರ್ಯ ಅವರು ಭೇಟಿಯ ವಿಚಾರವಾಗಿ ಚರ್ಚೆಗಳು ಜೋರಾಗಿವೆ.


ವಿಜಯೇಂದ್ರ ಅವರ ಬಣದಲ್ಲಿ ಗುರುತಿಸಿಕೊಂಡಿರುವ ಎಂಪಿ ರೇಣುಕಾಚಾರ್ಯ ಅವರು ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸಚಿವರೂ ಆಗಿದ್ದರು. ಈಗ ಬಿಜೆಪಿಯಲ್ಲಿ ಯತ್ನಾಳ್ ಬಣಕ್ಕೆ ಸೆಡ್ಡು ಹೊಡೆಯಲು ಲಿಂಗಾಯತರ ನಾಯಕ ಸಭೆಗಳನ್ನು ಆಯೋಜಿಸುವ ಮೂಲಕ ರೇಣುಕಾಚಾರ್ಯ ಟಕ್ಕರ್ ಕೊಟ್ಟಿದ್ದರು. ರಾಜ್ಯದಲ್ಲಿ ಮತ್ತೆ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರುವುದು ನಮ್ಮ ಗುರಿ ಎಂದು ಹೇಳಿದ್ದ ರೇಣುಕಾಚಾರ್ಯ ಅವರು ಸದ್ದಿಲ್ಲದೆ ಕಾಂಗ್ರೆಸ್ ಕಡೆಗೆ ಮುಖ ಮಾಡಿದ್ದಾರಾ? ಎಂಬ ಮಾತುಗಳು ಕೇಳಿಬರುತ್ತಿವೆ.

# ಡಿಸಿಎಂ ಡಿಕೆಶಿಗೆ ಶುಭ ಹಾರೈಸಿದ ರಘುಮೂರ್ತಿ

» ಚಿತ್ರದುರ್ಗ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷರಾಗಿ ಐದು ವರ್ಷ ಪೂರ್ಣ ಹಿನ್ನೆಲೆಯಲ್ಲಿ ಗುರುವಾರ ಸಂಜೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಭೇಟಿ ಚಳ್ಳಕೆರೆ ಶಾಸಕ ಹಾಗೂ ಸಣ್ಣ ಕೈಗಾರಿಕೆ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶಾಸಕ ಟಿ.ರಘುಮೂರ್ತಿ ಮಾತನಾಡಿ ನಮ್ಮ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಅವರು ಸಮರ್ಥವಾಗಿ ಪಕ್ಷ ಮುನ್ನಡೆಸುವ ಮೂಲಕ ಪಕ್ಷ ಅಧಿಕಾರಕ್ಕೆ ತರುವಲ್ಲಿ ಸಾಕಷ್ಟು ಶ್ರಮಿಸಿದ್ದಾರೆ. ಐದು ವರ್ಷ ಪೂರ್ಣಗೊಳಿಸಿದ್ದು ಅವರಿಗೆ ಶುಭ ಹಾರೈಸಿ ಚಿತ್ರದುರ್ಗ ಜಿಲ್ಲೆಯ ಕನಸಾದ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳಿಗೆ ಮತ್ತಷ್ಟು ವೇಗ ನೀಡಲು ಮನವಿ ಮಾಡಿದ್ದೇವೆ. ಜಿಲ್ಲೆಯ ಜನರಿಗೆ ಭದ್ರಾದಿಂದ ಆಗುವಂತಹ ಪ್ರಯೋಜನ ಉಪಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದು ಭದ್ರಾ ಮೇಲ್ದಂಡೆ ಯೋಜನೆಯ ಚಿತ್ರದುರ್ಗ ಹಾಗೂ ತುಮಕೂರು ಶಾಖಾ □ ಕಾಲುವೆಗಳ ಆರಂಭಿಕ ಸರಪಳಿಗಳಲ್ಲಿ ಉದ್ಭವಿಸಿರುವ ಭೂಸ್ವಾಧೀನ ಸಮಸ್ಯೆಯ ಕುರಿತು ಇಂದು ಸಭೆ ಸಹ ನಡೆಸಿ ಸೂಕ್ತ ಕ್ರಮಕ್ಕೆ ಡಿಸಿಎಂ ಅವರು ಸೂಚನೆ ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರದ



ಐದು ಗ್ಯಾರಂಟಿ ಯೋಜನೆಗಳ ಬಡ ಜನರ ಆರ್ಥಿಕತೆ ಸುಧಾರಣೆ ಮಾಡಿದ್ದು ನೆಮ್ಮದಿ ಬದುಕು ನಡೆಸಲು ಸಹಕಾರಿಯಾಗಿದೆ. ಯಾರು ಏನೇ ಹೇಳಿದರು ನಮ್ಮ ಸರ್ಕಾರ ನುಡಿದಂತೆ ನಡೆಯುತ್ತದೆ.ಜಿಲ್ಲೆ ಸಮಗ್ರ ಅಭಿವೃದ್ಧಿಗೆ ಎಲ್ಲಾರೂ ಒಟ್ಟಾಗಿ ಶ್ರಮಿಸುತ್ತೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ , ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಇದ್ದರು.

## ಅಧ್ಯಕ್ಷೆಯಾಗಿ ಸುಮಾ ಭರಮಣ್ಣ ಅಧಿಕಾರ ಸ್ವೀಕಾರ



» ಚಳ್ಳಕೆರೆ

ನಗರಸಭೆ ಅಧ್ಯಕ್ಷೆಯಾಗಿ ಕಾರ್ಯನಿರ್ವಹಿಸುತ್ತಿದ್ದ ಜೈತುಂಬಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ರಾಜೀನಾಮೆಯನ್ನು ಜಿಲ್ಲಾಧಿಕಾರಿಗಳು ಅಂಗೀಕರಿಸಿದ ಕಾರಣ ಉಪಾಧ್ಯಕ್ಷೆ ಸುಮಾ ಭರಮಣ್ಣ ಪ್ರಭಾರ ಅಧ್ಯಕ್ಷೆಯಾಗಿ ಬುಧವಾರ ಸಂಜೆ ಅಧಿಕಾರ ವಹಿಸಿಕೊಂಡರು ಎಂದು ಪೌರಾಯುಕ್ತ ಎಚ್.ಜಿ.ಜಗರೆಡ್ಡಿ ತಿಳಿಸಿದ್ದಾರೆ.ಅವರು ಪತ್ರಿಕೆಯೊಂದಿಗೆ ಮಾತನಾಡಿ, ನಗರಸಭೆಯ ಅಭಿವೃದ್ಧಿ ಸಂಬಂಧಪಟ್ಟಂತೆ ಹಲವಾರು ಯೋಜನೆಗಳ ಅನುಷ್ಠಾನಗೊಳಿಸಲು ಸಿದ್ದತೆ ನಡೆದಿವೆ. ಪ್ರತಿವರ್ಷದಂತೆ ಈ ವರ್ಷವೂ 2025-26ನೇ ಸಾಲಿನ ದಿನವಹಿ, ವಾರದ ಸಂತೆ, ಬಸ್ ಮತ್ತು ದ್ವಿಚಕ್ರವಾಹನ ನಿಲುಗಡೆ ಹರಾಜು ಪ್ರಕ್ರಿಯೆ ಬುಧವಾರ ನಡೆಯಬೇಕಿದ್ದು, ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದರು.ಪ್ರಭಾರ ಅಧ್ಯಕ್ಷೆಯಾಗಿ ಅಧಿಕಾರ ವಹಿಸಿಕೊಂಡ ಸುಮಭರಮಣ್ಣನವರನ್ನು ಪೌರಾಯುಕ್ತ ಜಗರೆಡ್ಡಿ, ನಗರಸಭಾ ಸದಸ್ಯರಾದ ಆರ್.ಮಂಜುಳಾ, ವೈ.ಪ್ರಕಾಶ್, ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಹೊಯ್ಸಳಗೋವಿಂದ, ನಾಮಿನಿಸದಸ್ಯರಾದ ಆರ್.ವೀರಭದ್ರಪ್ಪ ಉಪಸ್ಥಿತರಿದ್ದರು.

# ಸಾರ್ವಜನಿಕರ ಉತ್ತಮ ಸಹಕಾರದಿಂದ ಪೊಲೀಸ್ ಕಾರ್ಯ ಸುಗಮ: ಡಿವೈಎಸ್ಪಿ

» ಚಳ್ಳಕೆರೆ

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಎನ್.ಉಪ್ಪಾರಹಟ್ಟಿ ಗ್ರಾಮದ ಜೆ.ಎಸ್. ತಿಪ್ಪೇಸ್ವಾಮಿ ಕಳೆದ ಹಲವಾರು ವರ್ಷಗಳಿಂದ ಪೊಲೀಸ್ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸಿ ಖ್ಯಾತಿಯಾಗಿದ್ದು, ಚಿತ್ರದುರ್ಗ ನಗರಠಾಣೆಯ ಇನ್ಸ್‌ಪೆಕ್ಟರಾಗಿದ್ದ ಅವರಿಗೆ ಇತ್ತೀಚೆಗೆ ಡಿವೈಎಸ್ಪಿಯಾಗಿ ಮುಂಬಡ್ತಿ ದೊರೆತು ಚಿಕ್ಕಮಗಳೂರಿನ ಸೈಬರ್‌ಕ್ರೈಂ ವಿಭಾಗದ ಡಿವೈಎಸ್ಪಿಯಾಗಿ ಉತ್ತಮ ಹೆಸರುಗಳಿಸಲಿ ಎಂದು ಎಲ್‌ಐಸಿದುಗ್ಗಾವರರಂಗಸ್ವಾಮಿ ಹೇಳಿದರು.

ಕಾರ್ಯನಿಮಿತ್ತ ಚಳ್ಳಕೆರೆಗೆ ಆಗಮಿಸಿದ್ದ ಡಿವೈಎಸ್ಪಿ ಜೆ.ಎಸ್.ತಿಪ್ಪೇಸ್ವಾಮಿಯವರನ್ನು ಎಲ್‌ಐಸಿದುಗ್ಗಾವರರಂಗಸ್ವಾಮಿಅಭಿಮಾನಿ ಬಳಗದವತಿಯಿಂದ ಪ್ರವಾಸಿಮಂದಿರದಲ್ಲಿ ಸನ್ಮಾನಿಸಿ ಮಾತನಾಡಿದರು. ಜೆ.ಎಸ್.



ತಿಪ್ಪೇಸ್ವಾಮಿ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿಷ್ಟೆಗೆ ಹೆಸರಾದವರು. ಕಳೆದ 23 ವರ್ಷಗಳಲ್ಲಿ ಚಿತ್ರದುರ್ಗ, ಶಿವಮೊಗ್ಗ, ದಾವಣಗೆರೆ ಮುಂತಾದ ಜಿಲ್ಲೆಗಳಲ್ಲಿ ಕೆಲಸ ನಿರ್ವಹಿಸಿದವರು. ಸಬ್‌ಇನ್ಸ್‌ಪೆಕ್ಟರ್ ಹುದ್ದೆಯಿಂದ ವೃತ್ತ ನಿರೀಕ್ಷಕರಾಗಿ ಮುಂಬಡ್ತಿ ದೊರೆತು ಚಳ್ಳಕೆರೆ ಠಾಣೆಯಲ್ಲಿ ಕಾರ್ಯನಿರ್ವಹಿಸಿ ನಂತರ ಚಿತ್ರದುರ್ಗಕ್ಕೆನಗರಠಾಣೆಗೆ ತೆರಳಿ ಅಲ್ಲಿಂದ ಡಿವೈಎಸ್ಪಿಯಾಗಿ ಪದೋನ್ನತ್ತಿ ಹೊಂದಿದ್ದಾರೆ. ಅವರ ಸೇವೆಯಲ್ಲಿ ಯಾವುದೇ ದೋಷವನ್ನು ಕಾಣಲು ಸಾಧ್ಯವಿಲ್ಲ. ಸಾರ್ವಜನಿಕರು ಮತ್ತು ಇಲಾಖೆ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸಿದ್ದಾರೆಂದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಡಿವೈಎಸ್ಪಿ ಜೆ.ಎಸ್.ತಿಪ್ಪೇಸ್ವಾಮಿ, ಚಳ್ಳಕೆರೆ ತಾಲ್ಲೂಕು ನನ್ನ ಜನ್ಮಭೂಮಿಯೂ ಹೌದು,ಕರ್ಮಭೂಮಿಯೂ ಹೌದು. ಪೊಲೀಸ್ ಇಲಾಖೆಯಲ್ಲಿ ಸೇವೆ ಮಾಡುವಾಗ ಎಲ್ಲರ ಹಿತವನ್ನು ಕಾಪಾಡುವುದು ಮುಖ್ಯವಾಗುತ್ತದೆ. ಪೊಲೀಸ್ ಇಲಾಖೆಯ ಮುಖ್ಯ ಉದ್ದೇಶ ಶಾಂತಿ ಸೌಹಾರ್ಧತೆ ಕಾಪಾಡುವುದು. ಸಮಾಜಘಾತುಕ ಶಕ್ತಿಗಳನ್ನು ಶಿಕ್ಷಿಸಬೇಕಾಗುತ್ತದೆ. ಸಾರ್ವಜನಿಕರು ನೀಡಿದ ಸಹಕಾರದಿಂದ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗಿದೆ ಎಂದರು.

ಎಲ್‌ಐಸಿ ಶಾಖಾಧಿಕಾರಿ ಕೆ.ಪಿ.ಚನ್ನಪ್ಪ, ಉಪಶಾಖಾಧಿಕಾರಿ ಸೂರಪ್ಪ, ತಿಪ್ಪೇಸ್ವಾಮಿ, ಪಾಪಣ್ಣ, ಬೇಕರಿವಿಜಯಣ್ಣ, ಟಿ.ವೆಂಕಟೇಶ್, ಎಂ.ಸಂಜೀವಪ್ಪ, ಭುಜಂಗರಾಜ್, ಕೆ.ಬೋರಯ್ಯ, ಜೆ.ಆರ್. ಉಮೇಶ್‌ಕುಮಾರ್, ಜಗದೀಶ್, ಆರ್. ರುದ್ರಮುನಿ, ಕರೀಕೆರೆತಿಪ್ಪೇಸ್ವಾಮಿ, ನೇತಾಜಿಪ್ರಸನ್ನ, ಹುಲಿಕುಂಟೆಕಾಂತರಾಜು, ಮಹಲಿಂಗಪ್ಪ, ಆದರ್ಶ ಭೂತರಾಯ, ದರ್ಶನ್, ಜೆ.ಲೋಕೇಶ್, ಪರಸಪ್ಪ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಅಕ್ರಮ ಗಣಿ, ಕ್ರಷರ್ ನಡೆಯುತ್ತಿದ್ದರೂ ಮೌನ ಸರಿಯಲ್ಲ

» ದಾವಣಗೆರೆ

ಹೊನ್ನಾಳಿ - ನ್ಯಾಮತಿ ತಾಲೂಕಿನ ಆರುಂಡಿ ಗ್ರಾಮದಲ್ಲಿ ಕಲ್ಲುಗಣಿಗಾರಿಕೆ ಶಾಶ್ವತ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿ ಆರುಂಡಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಈ ಪ್ರತಿಭಟನೆಗೆ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ.ಬಿ.ವಿನಯ್ ಕುಮಾರ್ ಸಾಥ್ ನೀಡಿದರು.

ನ್ಯಾಮತಿ ತಾಲೂಕಿನ ಆರುಂಡಿ ಗ್ರಾಮಸ್ಥರಿಂದ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಮನವಿ ನೀಡಿದ್ದು, ಕಲ್ಲು ಗಣಿಗಾರಿಕೆಯನ್ನು ಶಾಶ್ವತವಾಗಿ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಆರುಂಡಿ ಗ್ರಾಮದ ವ್ಯಾಪ್ತಿಯಲ್ಲಿ ಬರುವ ನಿಯಮಬಾಹಿರ ಮತ್ತು ಕಾನೂನು ಮೀರಿ ನಡೆಸುತ್ತಿರುವ ಕಲ್ಲು ಕ್ವಾರಿಗಳನ್ನು ಸ್ಥಗಿತಗೊಳಿಸಬೇಕು ಎಂದು ಈ ಹಿಂದೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದ್ದರೂ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ಕಲ್ಲು ಗಣಿಗಾರಿಕೆ ಮತ್ತು ಕ್ರಷರ್ ಗಳನ್ನು ನಡೆಸುತ್ತಿರುವುದರಿಂದ



ಹಲವು ರೀತಿಯ ಸಮಸ್ಯೆಗಳು ಎದುರಾಗಿವೆ. ಹಾನಿಯೂ ಸಂಭವಿಸಿದೆ. ಮನೆಗಳು ಬಿರುಕು ಬಿಟ್ಟಿವೆ. ಅಂತರ್ಜಲ ಮಟ್ಟ ಕುಸಿತಗೊಂಡಿದೆ. ವಾಯು ಮಾಲಿನ್ಯದಿಂದಾಗಿ ರೋಗ ರುಜಿನಗಳು ಹರಡುತ್ತಿವೆ. ಪಶುಸಂಗೋಪನೆಯಲ್ಲಿ ಕುಂಠಿತ ಗೊಂಡಿದೆ. ಹಲವು ಸಮಸ್ಯೆಗಳು ಎದುರಾಗಿದ್ದರೂ ಅಕ್ರಮವಾಗಿ ಕಲ್ಲು ಗಣಿಗಾರಿಕೆ ಮತ್ತು ಕ್ರಷರ್‌ಗಳನ್ನು ನಡೆಸಲಾಗುತ್ತಿದೆ. ಜನರ ಆರೋಗ್ಯ ಮತ್ತು ಪರಿಸರ ದೃಷ್ಟಿಯಿಂದ ಕೂಡಲೇ ಸ್ಥಗಿತಗೊಳಿಸಬೇಕು. ಮತ್ತೆ ಯಾವುದೇ ಕಾರಣಕ್ಕೂ ತಲೆ ಎತ್ತಲು ಬಿಡಬಾರದು. ಜಿಲ್ಲಾಧಿಕಾರಿಗಳು ಹಾಗೂ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಹೋರಾಟ ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.ಈ ವೇಳೆ ಮಾತನಾಡಿದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ.ಬಿ.ವಿನಯ್ ಕುಮಾರ್, ಗ್ರಾಮದಜನರಿಗೆತೊಂದರೆಯಾಗುತ್ತಿದ್ದರೂ ಜನಪ್ರತಿನಿಧಿಗಳು ಕಣ್ಮುಚ್ಚಿ ಕುಳಿತಿರುವುದು ಆಶ್ಚರ್ಯ ತಂದಿದೆ. ವಾಯು ಮಾಲಿನ್ಯ ಉಂಟಾಗಿದೆ. ಮನೆಯಲ್ಲಿ ಬಿರುಕು ಬಿಟ್ಟಿದ್ದು, ಜನರು ಆತಂಕದಲ್ಲಿಯೇ ವಾಸ ಮಾಡುತ್ತಿದ್ದಾರೆ. ಅನಧಿಕೃತವಾಗಿ ನಡೆಸುತ್ತಿರುವ ಗಣಿಗಾರಿಕೆ ನಿಲ್ಲಿಸಬೇಕು. ಕ್ರಷರ್ ಗಳ ಕಾರ್ಯಾಚರಣೆಯೂ ಸ್ಥಗಿತವಾಗಬೇಕು. ಆರುಂಡಿ ಗ್ರಾಮಸ್ಥರ ಹೋರಾಟಕ್ಕೆ ಸದಾ ಬೆಂಬಲವಾಗಿ ನಿಲ್ಲುತ್ತೇನೆ ಎಂದು ಹೇಳಿದರು.

ಗ್ರಾಮ ಮತ್ತು ಜನರ ಉಳಿವಿನ ಹೋರಾಟ ಇದು. ನಮ್ಮ ಪರಿಸರ ಉಳಿಸಲು ನಿಮ್ಮ ಸಹಕಾರ ಎಂಬ ವಿನೂತನ ಹೋರಾಟ ಇದು. ಮನವಿ ಪತ್ರವನ್ನು ನೂರಾರು ಗ್ರಾಮಸ್ಥರೊಂದಿಗೆ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ್ದೇವೆ. ಅಲ್ಲಿ ಆಗುತ್ತಿರುವ ಅನಾಹುತಗಳನ್ನು ಗಮನಕ್ಕೆ ತಂದಿದ್ದೇವೆ ಎಂದು ಮಾಹಿತಿ ನೀಡಿದರು. ಮನವಿ ಸಲ್ಲಿಸುವ ವೇಳೆಯಲ್ಲಿ ಆರುಂಡಿ ಗ್ರಾಮದ ಹಿರಿಯ ಮುಖಂಡರಾದ ಸಿ. ಚಂದ್ರಪ್ಪ, ಶಿವಪ್ಪ, ಸತೀಶಪ್ಪ, ಬಿ. ಆರ್. ಪ್ರಕಾಶ್, ಶ್ರೀನಿವಾಸ್, ರಾಮಚಂದ್ರಪ್ಪ, ವೀರೇಶ್, ಮೂರ್ತೆಪ್ಪ, ಬೀರಪ್ಪ, ನರಸಿಂಹಪ್ಪ, ಸುರೇಶ್, ಕುಮಾರಪ್ಪ, ಹಾಲೇಶಪ್ಪ, ತಿಮ್ಮಣ್ಣ, ತಿಮ್ಮಜ್ಜರ ಶ್ರೀನಿವಾಸ್, ಜವಳಿ ಪ್ರಕಾಶ್ ಹಾಜರಿದ್ದರು.



ಮಧ್ಯ ಕರ್ನಾಟಕದ ಬುಡಕಟ್ಟು ಸಂಸ್ಕೃತಿಯ ಆರಾಧ್ಯ ದೈವ ನಾಯಕನಹಟ್ಟಿಯ ತಿಪ್ಪೇರುದ್ರಸ್ವಾಮಿಗಳ ರಥೋತ್ಸವ ಇಂದು. ಆ ನಿಮಿತ್ತ ಪ್ರಭು ಚನ್ನಬಸವ ಸ್ವಾಮೀಜಿ ಅವರ "ಮಹಾತ್ಮರ ಚರಿತಾಮೃತ" ಕೃತಿಯಿಂದ ಸಂಪಾದಿಸಿ ಕೊಟ್ಟಿದ್ದಾರೆ. ರುದ್ರಮೂರ್ತಿ.ಎಂ.ಜೆ

## ನಿಜ ನಿಷ್ಠೆಯ, ಓರ್ವ ಸ್ವಾಮಿಗೆ ತಿಪ್ಪೇಯು; ಪಲ್ಲಕ್ಕಿಯೂ ಒಂದೇ ಎಂದು ಬದುಕಿ ತೋರಿದ

# ನಾಯಕನಹಟ್ಟಿಯ ತಿಪ್ಪೇರುದ್ರಸ್ವಾಮಿಗಳು

ವಿಶ್ವ ಸಾಂಸ್ಕೃತಿಕ ಇತಿಹಾಸ ದಲ್ಲಿಯೇ ಬಸವಣ್ಣನವರ ಸಾಮಾ ಜಿಕ ಕ್ರಾಂತಿ, ಶರಣರ ಅನುಭಾವ ಕ್ರಾಂತಿ ಸುವರ್ಣಾಧ್ಯಾಯ .ಆಗ ನಡೆದ ಕಲ್ಯಾಣಕ್ರಾಂತಿಯಿಂದ ಮುಂದೆ ನಾಡಿಗೆ ನೆರವಾಗಬೇಕಿದ್ದ ಶಿವಭಕ್ತಿಯ ಬೆಳಕಿಗೆ ಮಂಕು ಆವರಿಸಿತು. ಶರಣರು, ಶಿವಯೋಗಿಗಳು ದೇಶದ ತುಂಬೆಲ್ಲಾ ಸಂಚಾರ ಕೈಗೊಂಡರು. ಆದರೆ ಆ ಶಿವಶರಣರ ಕ್ರಾಂತಿಯ ಧೀಶಕ್ತಿ ಕುಂಠಿತವಾಗಿತ್ತೇ ಹೊರತು, ದೀಪಾ ನಂದಿರಲಿಲ್ಲ. ಶಾಂತವಾಗಿರಲಿಲ್ಲ. ಇಂತಹ ಬಸವಣ್ಣನವರ ಶಿವಭಕ್ತಿಯ ಕಲ್ಯಾಣದ ಪಣತಗೆ ಜ್ಯೋತಿಯಾಗಿ ಸರಿಸುಮಾರು 300 ವರ್ಷಗಳ ನಂತರ ಯೋಗಿಗಳ ಪರಂಜ್ಯೋತಿ ತಾಣವಾದ ಶಿವನ ಶ್ರೀ ಗಿರಿ ಶ್ರೀಶೈಲದಿಂದ ಐದು ಜನ ಮಹಾಯೋಗಿಗಳು ಕನ್ನಡ ನಾಡಿಗೆ ಆಗಮಿಸುತ್ತಾರೆ. ಮೊದಲನೆಯವರು ತೇರದಾಳದ ಮಗಿ ಪ್ರಭುದೇವರು, ಎರಡನೆಯವರು ಚೈತನ್ಯ ಜಂಗಮ ನಾಯಕನಹಟ್ಟಿಯ ಶ್ರೀ ಗುರು ತಿಪ್ಪೇರುದ್ರ ಮಹಾಸ್ವಾಮಿಗಳವರು.

ಹದಿನೈದನೆಯ ಶತಮಾನದ ಅಂತ್ಯದಲ್ಲಿ ಶ್ರೀಶೈಲದಿಂದ ಲೋಕ ಸಂಚಾರ ಕೈಗೊಳ್ಳುತ್ತಾ ಕರುನಾಡಿಗೆ ಬಂದ ಕಾರಣಿಕ ಯುಗಪುರುಷ, ಅಪರೂಪದ ಪವಾಡಪುರುಷ ನಾಯಕ ಮಹಾ ನಾಯಕ ನ್ಯಾಯಾಧೀಶ ಶ್ರೀ ಗುರು ತಿಪ್ಪೇರುದ್ದೇಶ!!

**ಏನಿದು ತಿಪ್ಪೇರುದ್ರ !** :-ವರಗುರು ತಿಪ್ಪೇರುದ್ರ ಶ್ರೀಗಳ ಮೂಲ ಹೆಸರು ರುದ್ರ ಸ್ವಾಮಿಗಳು, ರುದ್ರದೇವರು ಎಂದು. ರಾಯದುರ್ಗದ ಪುಣ್ಯ ಪರಿಸರದಲ್ಲಿ ಧ್ಯಾನಸ್ಥರಾಗಿ ಕುಳಿತಿರುವಾಗ ಆ ಭಾಗದ ಓರ್ವ ಡಂಬಾಚಾರಿ- ಅನಾಚಾರಿಸ್ವಾಮಿ ಜನರನ್ನು ಮೋಸ ಮಾಡುತ್ತಿದ್ದ. ಆತನೇ ಕೆಂಪಯ್ಯ ಸ್ವಾಮಿ. ಧಾರ್ಮಿಕವಾಗಿ ಜನರನ್ನು ತಪ್ಪು ದಾರಿಗೆ ಎಳೆಯುತಿದ್ದ. ಅಷ್ಟೇ ಅಲ್ಲದೆ ಅಡ್ಡ ಪಲ್ಲಕ್ಕಿ ಉತ್ಸವ ಮಾಡಿಕೊಳ್ಳುತ್ತಿದ್ದ. ಹೀಗಿರುವಾಗ ಒಮ್ಮೆ ಪಲ್ಲಕ್ಕಿಯೊಳಗೆ ಕುಳಿತು ಉತ್ಸವದೊಂದಿಗೆ ಠೇಂಕಾರ ತೋರಿಸುತ್ತಾ ಬರುತ್ತಿದ್ದ. ಈ ಶಬ್ದ ಕೇಳಿ ಓಹೋ ಎದುರಿಗೆ ಉತ್ಸವ ಬರುತ್ತಿದ್ದಂತೆ ಉಗ್ರರಾದ ರುದ್ರದೇವರು ಕಲ್ಲುಕಟ್ಟೆಯ ಮೇಲಿಂದ ನೆಗೆದು( ಜಿಗಿದು) ಪಕ್ಕದಲ್ಲಿದ್ದ ತಿಪ್ಪೆಯ ಮೇಲೆ ಹಾರಿ ಕುಳಿತರು. ಕೆಳಗಡೆ ಕೆಸರು ,ಹೊಲಸು, ಏನೆಲ್ಲಾ ಇತ್ತು. ಅಯ್ಯೋ ರುದ್ರನಿಗೆ ಎಂತಹ ಸ್ಥಿತಿ ಬಂತು ನೋಡಿ ಎಂದು ಗೇಲಿ ಮಾಡಿದ ಕೆಂಪಯ್ಯಸ್ವಾಮಿ. ಓಹೋ ಎಂದವರೆ ಕುಣಿಯಲು ಆರಂಭಿಸಿದರು. ಆ ತಿಪ್ಪೆ ಹೂವಿನ ಸಮೇತವಾಗಿ, ಹಣ್ಣು, ದವಸ, ವಸ್ತ್ರಗಳ ಮಂಟಪವಾಗಿ ಕಂಗೊಳಿಸತೊಡಗಿತು. ಅಲ್ಲಿ ಪಲ್ಲಕ್ಕಿ ಭೂಭಾರವಾಗಿ ಭಕ್ತರಿಗೆ ಹೊಲಸು ವಾಸನೆ ಬರಲು ಆರಂಭಿಸಿತು. ಗುರುಗಳ ಸತ್ಯವನ್ನು ಅರಿತ ಕೆಂಪಯ್ಯಸ್ವಾಮಿ ಹಾಗೂ ಅತನ ಭಕ್ತರು ಶರಣಾದರು.ಆಗ ರುದ್ರದೇವರು ಅಪ್ಪಣೆ ಕೊಡಿಸಿದರು. ಏ ಸ್ವಾಮಿಗಳಿರಾ ಏ ಶರಣ ಬಂಧುಗಳಿರಾ ನಿಜನಿಷ್ಠೆಯ ಸ್ವಾಮಿ ನೆಲೆ ನಿಂತ ಎಂತಹ ಸ್ಥಳವಾದರೂ ಸರಿ ಅದು ಉಪ್ಪರಿಗೆಯೇ... ಆ ಕಾರಣಕ್ಕಾಗಿ ಓರ್ವ ಶ್ರೇಷ್ಠ ಸನ್ಯಾಸಿಗೆ ಪಲ್ಲಕ್ಕಿಯೂ ಒಂದೇ ತಿಪ್ಪೆಯೂ ಒಂದೆ.. ತಿಪ್ಪೇಯೂ ಒಂದೇ-ಉಪ್ಪರಿಗೆಯೂ ಒಂದೆ ಎಂದರು. ಅಂದಿನಿಂದ ರುದ್ರದೇವರಿಗೆ ತಿಪ್ಪೇಸ್ವಾಮಿ, ತಿಪ್ಪೇರುದ್ರಸ್ವಾಮಿ ಎನ್ನುವ ಖ್ಯಾತಿ ಪ್ರತೀತಿ ಬೆಳೆದು ಬಂದಿತು. ಇದು ಈ ನಾಡಿನಲ್ಲಿ ಇರುವ ವೈಶಿಷ್ಟ್ಯ,ವಿಶೇಷ. ವಿಭಿನ್ನ ಹೆಸರಿನ ಏಕೈಕ ಶ್ರೀ ರುದ್ರ ಈ ತಿಪ್ಪೇರುದ್ರಸ್ವಾಮಿ!

**ನಾಯಕನಹಟ್ಟಿಗೆ ನಾಯಕ!** ರಾಯದುರ್ಗಕ್ಕೆ ವ್ಯಾಪಾರಕ್ಕೆಂದು ನಾಯಕನಹಟ್ಟಿಯಿಂದ ಬಂದಿದ್ದ ಫಣಿಯಪ್ಪ ರಾಯದುರ್ಗದ ಕೋಟೆಯ ಸುತ್ತ ನಡೆದ ಶ್ರೀಗಳ ಪವಾಡ ಕಂಡು ಧನ್ಯನಾಗಿ ಸಾಷ್ಟಾಂಗವರಗಿದ. ಗುರುದೇವ ತಾವು ನಮ್ಮ ಊರಿಗೆ ಬಂದು



ತಾವು ನೆಲೆ ನಿಲ್ಲಬೇಕು. ಬಡವರು, ಅನಾಥರ ಬಾಳು ಬೆಳಗಬೇಕು ಎಂದು ಅಂಗಲಾಚಿ ಬೇಡಿಕೊಂಡ. ಭಕ್ತನ ಬಿನ್ನಹ ಮನ್ನಿಸಿ ಬಂದರು ತಿಪ್ಪೇರುದ್ರರು. ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲೂಕಿನ ನಾಯಕನಹಟ್ಟಿಯು ಚಳ್ಳಕೆರೆ ತಾಲೂಕು ಕೇಂದ್ರದಿಂದ 20 ಮೈಲಿ ದೂರದಲ್ಲಿದೆ. ಇದು ದೊರೆ ಮಲ್ಲಪ್ಪ ನಾಯಕನ ಆಡಳಿತ ಸಂಸ್ಥಾನ .ಇಂತಹ ಅಪರೂಪದ ಪರಿಸರದೊಳಗೆ ಬಂದು ನೆಲೆ ನಿಂತ ನಿರಂಜನ ಶಿವಯೋಗಿ ಈ ತಿಪ್ಪೇರುದ್ರಸ್ವಾಮಿ!

**ದೊರೆಗೆ ದೇವಿಯಿಂದ ಉತ್ತರ !:** ಊರಿಗೇನೋ ಬಂದಾಯಿತು. ಆದರೆ ವಾಸಸ್ಥಾನವೆಲ್ಲಿ?ಎಂದು ಆಲೋಚಿಸುವಾಗ ಎದುರಿಗೆ ದೊರೆತಿದ್ದ ಊರದೇವಿ ಮಾರಮ್ಮನ ಮಂದಿರ.ಓಹೋ ಇದೇ ನಮಗೆ ಸರಿಯಾದ ಸ್ಥಳವೆಂದು ಅಲ್ಲಿ ವಾಸವಾದರು. ಒಂದು ದಿನ ಬಿಟ್ಟು ಒಂದು ದಿನ ರಾಜ ಮಾರಮ್ಮನ ದರ್ಶನಕ್ಕೆ ಬರುತ್ತಿದ್ದ.ತಿಪ್ಪೇರುದ್ರರು ದೇವಸ್ಥಾನದಲ್ಲಿ ಮಲಗಿದ್ದರು.ಅಸಡ್ಡೆ ತಾರಕಕ್ಕೇರಿತ್ತು. ಮಲ್ಲಪ್ಪ ನಾಯಕ ನೋಡಿ ಕುಪಿತಗೊಂಡ. ಯಾರು ನೀನು? ಇಲ್ಲಿ ಹೀಗೇಕೆ ಮಲಗಿದ್ದೀಯಾ ? ನಿನ್ನ ಅವಸ್ಥೆ ಸರಿಯಿಲ್ಲ. ಎಂದು ಕಿರುಚಿದ. ಆಗ ಗುರುಗಳು "ನನ್ನ ಕೇಳಬೇಡ ನಿನ್ನ ದೇವಿಯನ್ನೇ ಕೇಳು" ಎಂದರು.

" ಯಾರಮ್ಮ ಈತ" ಎಂದರು ಗರ್ಭಗುಡಿಯಿಂದ ವಾಣಿ ಬಂದಿತು. ದೊರೆ ಇವರು ರಾಜಯೋಗಿ ಹಠಯೋಗಿ ತಿಪ್ಪೇಸ್ವಾಮಿ, ನೀನು ಇವರಿಗೆ ಶರಣಾಗು ಶರಣಾಗು ಎಂದು ದೇವಿಯ ಆದೇಶವಾಯಿತು. ಅಯ್ಯೋ ಗುರುವೇ ತಪ್ಪಾಯಿತೆಂದು ಪಾದ ಹಿಡಿದ ದೊರೆ ಮಲ್ಲಪ್ಪ ನಾಯಕ. ದೇವಸ್ಥಾನದ ತುಂಬಾ ಜೋಳಿಗೆ ಚಿತ್ರಗಳೇ ಕಾಣಲಾರಂಭಿಸಿದವು. ನನ್ನ ಆಸ್ಥಾನದ ರಾಜಗುರು ನೀವೇ ಆಗಬೇಕೆಂದು ಕೇಳಿಕೊಂಡ. ಅಲ್ಲಿಯೇ ನೆಲೆ ನಿಂತರು. ತಿಪ್ಪೇರುದ್ರರು ದೊರೆಗೆ ರಾಜ ಗುರುಗಳಾದರು ; ನಾಯಕನಹಟ್ಟಿಯ ಪರಿಸರಕ್ಕೆ ಪ್ರಭುಗಳಾದರು.

**ದೊರೆಗೆ ತೋರಿದ ದಾರಿ...ನಾಯಕನಹಟ್ಟಿ ಜಗದ ಜಟ್ಟಿ :** ರಾಜಯೋಗಿ ತಿಪ್ಪೇರುದ್ರ ಗುರುಗಳನ್ನು ತ್ರಿಕರಣಪೂರ್ವಕವಾಗಿ ನಂಬಿದ ಒಬ್ಬ ಗುರುಗಳ ಹತ್ತಿರ ಮಾರ್ಗದರ್ಶನಕ್ಕಾಗಿ ಬಂದ.ಜನ ಏಳ್ಗೆಗಾಗಿ ಯೋಜನೆಯನ್ನು ರೂಪಿಸು ಎಂದು ಮಾರ್ಗದರ್ಶನ ಮಾಡಿದರು. ಆಗ ಕೆರೆಗಳನ್ನು ಕಟ್ಟಿಸಲು ಆರಂಭಿಸಿದ. ರಾಮಸಾಗರ, ಭೀಮಸಾಗರ, ಜೊತೆಗೆ ಐದು ಕೆರೆಗಳ ಕಾರ್ಯ ಆರಂಭವಾಯಿತು. ಕೆಲವೇ ದಿನಗಳಲ್ಲಿ ಕೆರೆಗಳ ಕಾರ್ಯ ಪೂರ್ಣಗೊಂಡು, ಎಲ್ಲ ಸಾಗರ ಕೆರೆಗಳು ಮೈದುಂಬಿ ನಿಂತವು. ಬರಡಾದ ನಾಯಕನಹಟ್ಟಿಯ ಪರಿಸರ ಹಸಿರಿನಿಂದ ಕಂಗೊಳಿಸಲು ಆರಂಭಿಸಿತು. ತೆಂಗು, ಕಂಗು, ಮಾವು, ಬೇವು ಹಣ್ಣಿನ ಮರಗಳು ಎಲ್ಲ ರೀತಿಯಿಂದ ಫಸಲು ಬೆಳೆದವು. ತಿಪ್ಪೇರುದ್ರರ ಕೃಪೆಯಿಂದ ನಾಯಕನಹಟ್ಟಿ ಜಗದ ಜಟ್ಟಿಯಾಯಿತು.

**ದೈವಾಂಶ ಸಂಭೂತ!:** ಬಂಜರಭೂಮಿಗೆ ಬೆಳಕಾದ ತಿಪ್ಪೇರುದ್ರಮಹಾಸ್ವಾಮಿಗಳವರು ರಾಜನಿಗೆ ಲಿಂಗದಲ್ಲಿಯೇ ಕಾಶಿ-ಗೋಕರ್ಣ ರಾಮೇಶ್ವರ ತೋರಿಸಿ ಪವಾಡ ಮೆರೆದರು,. ಅರಸಿ ಬಂದವರಿಗೆ ವರದ ಹಸ್ತ ನೀಡಿ ಉದ್ಧರಿಸಿದರು .ಬೇಡಿದವರಿಗೆ ಬೇಡಿದ್ದನ್ನು ನೀಡಿದರು.ಗಾಳಿ-ಭೂತ ಪಿಶಾಚಿ ದೂರ ಮಾಡಿದರು.. ಶಿಷ್ಯ ಫಣಿಯಪ್ಪನನ್ನು ರಕ್ಷಿಸಿ ಹರಸಿದರು.ಮುಂದೆ ನಾಯಕನಹಟ್ಟಿಯಲ್ಲಿಯೇ ಜೀವಂತ ಸಮಾಧಿಸ್ಥರಾದರು.ಪ್ರತಿ ವರ್ಷ ಪಾಲ್ಗುಣ ಮಾಸದ ಬಹುಳದಲ್ಲಿ ಬರುವ ಚಿತ್ತಾ ನಕ್ಷತ್ರದ ಮೊದಲ ದಿನ ರಥೋತ್ಸವ, ಮುಂಜಾನೆ-ಮಧ್ಯಾಹ್ನ ನೆರವೇರುತ್ತದೆ. ಲಿಂಗೈಕ್ಯವಾದ ಪ್ರತಿಗಳಿಗೆ ಎಂದು ಸಂಸ್ಮರಿಸುತ್ತಾರೆ.ಆ ಸಂದರ್ಭದಲ್ಲಿ ಜನಪದ ಪರಿಷೆ ಬೃಹತ್ತಾಗಿ ನೆರವೇರುತ್ತದೆ. ಒಟ್ಟು ನಾಯಕನಹಟ್ಟಿಯಲ್ಲಿ 8 ಮಠಗಳಿವೆ. ತಿಪ್ಪೇರುದ್ರ ಸ್ವಾಮಿಗಳಮಠ ,ಹೊರಗಿನ ಮಠ ,ಏಕಾಂತ ಮಠ ,ಹಿರೇಮಠ ,ಗೌರೀಮಠ ,ಬೆಟ್ಟೆಬಂಡಿಮಠ, ಕಲ್ಲಪ್ಪದೇವರಮಠ ,ಬಾಳೆಹಳ್ಳಿಮಠ ,ನಂದಿಕೋಲಮಠ, ಭಿಕ್ಷಾವರ್ತಿಮಠ ಹೀಗೆ ಮಠಗಳ ಪರಿಸರ ಧಾರ್ಮಿಕ ಪರಿಸರದಿಂದ ನಾಯಕನಹಟ್ಟಿ ಭಕ್ತರ ಶ್ರದ್ಧಾಕೇಂದ್ರವಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T